Volume : 9 | Issue : 138 | August : 14 : 2026 : Friday
ಸಂಪುಟ : 9 | ಸಂಚಿಕೆ : 138 | ಆಗಸ್ಟ್ : 14 : 2026 : ಶುಕ್ರವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ



ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481

ಜಂತರ್ ಮಂತರ್ ಪ್ರತಿಭಟನೆ ಕುರಿತು ಸ್ಪಷ್ಟನೆ ನೀಡಿದ ಬಿಜೆಪಿ ಸಂಸದೆ ಕಂಗನಾ ರಣಾವತ್. ಪ್ರತಿಭಟನೆಯಲ್ಲಿ ಬಹುತೇಕರು ಜೆನ್ ಜಿ ಯುವಕರಲ್ಲ ಎಂದು ಹೇಳಿದ್ದಾರೆ.

ಸಿದ್ಧಾರ್ಥ ವಿಹಾರ ಭೂ ಹಗರಣ: ಪ್ರಿಯಾಂಕ್ ರಾಜೀನಾಮೆಗೆ ಆಗ್ರಹ — ಪುಟ 3

ನೇತಾಜಿ ಅವಮಾನ: ಬಿಜೆಪಿ ಸಂಸದನ 'ಬಂಗ ವಿಭೂಷಣ' ವಾಪಸ್ — ಪುಟ 4

## ■ ಸುದ್ದಿ ಚುಟುಕು

### ಪಾಕ್–ಐಸಿಸ್ ನಂಟು: ಕಲಬುರಗಿಯಲ್ಲಿ ಇಬ್ಬರು ವಶಕ್ಕೆ

● ವಿಕ್ರಮ ವಾಹಿನಿ । ಕಲಬುರಗಿ

ಪಾಕಿಸ್ತಾನ ಹಾಗೂ ಉಗ್ರ ಸಂಘಟನೆ ಐಸಿಸ್ ಜತೆ ಸಂಪರ್ಕ ಹೊಂದಿರುವ ಆರೋಪದ ಮೇರೆಗೆ ಉತ್ತರ ಪ್ರದೇಶ ಮೂಲದ ಇಬ್ಬರು ಶಂಕಿತರನ್ನು ಉತ್ತರ ಪ್ರದೇಶದ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ಮತ್ತು ಕಲಬುರಗಿ ಪೊಲೀಸರು ಜಂಟಿ ಕಾರ್ಯಾಚರಣೆಯಲ್ಲಿ ವಶಕ್ಕೆ ಪಡೆದಿದ್ದಾರೆ.

ಕಲಬುರಗಿ ತಾಲೂಕಿನ ಮಾಲಗತ್ತಿ ಹಾಗೂ ಉಪಳಾಂವ್ ಗ್ರಾಮದ ಹೊರವಲಯದಲ್ಲಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಮೊಹಮ್ಮದ್ ಸಮೀರ್ ಹಾಗೂ ಸಲ್ಮಾನ್ ಎಂಬುವರನ್ನು ವಶಕ್ಕೆ ಪಡೆದಿದ್ದಾರೆ. ಇಬ್ಬರೂ ಸ್ಥಳೀಯ ಮಾಂಸ ರಫ್ತು ಘಟಕವೊಂದರಲ್ಲಿ ಕೆಲಸ ಮಾಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಕೇಂದ್ರ ಗುಪ್ತಚರ ಇಲಾಖೆಯಿಂದ ಲಭಿಸಿದ ಮಾಹಿತಿ ಹಾಗೂ ಸಾಮಾಜಿಕ ಜಾಲತಾಣಗಳ ಮೇಲಿನ ನಿಗಾ ಆಧರಿಸಿ ಕಾರ್ಯಾಚರಣೆ ನಡೆಸಲಾಗಿದೆ. ಸಮೀರ್ ವಾಟ್ಸ್‌ಪ್ ಕರೆಗಳು ಹಾಗೂ ಫೇಸ್‌ಬುಕ್ ಮೂಲಕ ಪಾಕಿಸ್ತಾನ ಮೂಲದ ವ್ಯಕ್ತಿಗಳೊಂದಿಗೆ ಸಂಪರ್ಕದಲ್ಲಿದ್ದ ಎಂಬ ಆರೋಪ ಕೇಳಿಬಂದಿದೆ. ಆತನ ವಾಸದ ಕೊಠಡಿಯಲ್ಲಿ ಕೆಲವು ನಕ್ಷೆಗಳು ಪತ್ತೆಯಾಗಿವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಕುರಿತು ಕಲಬುರಗಿಯ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಶಂಕಿತರನ್ನು ಅಜ್ಞಾತ ಸ್ಥಳದಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ಸಾಮಾಜಿಕ ಜಾಲತಾಣಗಳ ಮೂಲಕ ದೇಶವಿರೋಧಿ ಚಟುವಟಿಕೆಗಳಿಗೆ ಸಂಬಂಧಿಸಿದ ಸಂಪರ್ಕಗಳಿದ್ದವೆಯೇ ಎಂಬುದರ ಕುರಿತು ತನಿಖೆ ಮುಂದುವರಿದಿದೆ.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಮಾತನಾಡಿ, ಸಾಮಾಜಿಕ ಜಾಲತಾಣಗಳ ನಿರಂತರ ಮೇಲ್ವಿಚಾರಣೆಯ ವೇಳೆ ಸಮೀರ್‌ನ ಚಟುವಟಿಕೆಗಳು ಪೊಲೀಸರ ಗಮನಕ್ಕೆ ಬಂದಿದ್ದವು. ಪಾಕಿಸ್ತಾನದ ವ್ಯಕ್ತಿಗಳು ನಿರ್ವಹಿಸುತ್ತಿದ್ದಾರೆ ಎನ್ನಲಾದ ಕೆಲವು ಖಾತೆಗಳೊಂದಿಗೆ ಆತ ಸಂಪರ್ಕದಲ್ಲಿದ್ದ ಶಂಕೆಯ ಹಿನ್ನೆಲೆಯಲ್ಲಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

## 'ಅಂದು ಹಿಂದುಗಳ ಹತ್ಯೆಗೈದ ಬಾಂಗ್ಲಾಕ್ಕೆ ಬೇಕಿಂದು ಸಹಾಯ'

**ನೈಸರ್ಗಿಕ ಅನಿಲದ ಕೊರತೆಯಿಂದ ವಿದ್ಯುತ್ ಉತ್ಪಾದನೆ ಕುಸಿತ; ಲೋಡ್‌ಶೆಡ್ಡಿಂಗ್ ಹೆಚ್ಚಳ. ಬಿಕ್ಕಟ್ಟು ನಿಭಾಯಿಸಲು ರಾತ್ರಿ 8ಕ್ಕೆ ಅಂಗಡಿ, ಮಾಲ್ ಬಂದ್ ಆದೇಶ; ಹೆಚ್ಚುವರಿ ಡೀಸೆಲ್‌ಗಾಗಿ ಭಾರತಕ್ಕೆ ಬಾಂಗ್ಲಾದೇಶ ಮನವಿ. ಇಂಧನ ಕೊರತೆ ತೀವ್ರಗೊಂಡ ಹಿನ್ನೆಲೆಯಲ್ಲಿ ವಿದ್ಯುತ್ ಬಳಕೆಗೆ ಕಡಿವಾಣ ಹಾಕಲು ಸರ್ಕಾರದಿಂದ ಕಠಿಣ ಕ್ರಮ.**

● ವಿಕ್ರಮ ವಾಹಿನಿ । ಢಾಕಾ

ತೀವ್ರ ವಿದ್ಯುತ್ ಮತ್ತು ಇಂಧನ ಬಿಕ್ಕಟ್ಟಿನಿಂದ ಬಳಲುತ್ತಿರುವ ಬಾಂಗ್ಲಾದೇಶ ಇದೀಗ ನೆರೆಯ ಭಾರತದ ಸಹಾಯ ಕೋರಿದೆ. ದೇಶದಲ್ಲಿ ವಿದ್ಯುತ್ ಉತ್ಪಾದನೆಗೆ ಅಗತ್ಯವಿರುವ ನೈಸರ್ಗಿಕ ಅನಿಲದ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ, ಅಂಗಡಿಗಳು, ಮಾರುಕಟ್ಟೆಗಳು ಹಾಗೂ ಶಾಪಿಂಗ್ ಮಾಲ್‌ಗಳನ್ನು ರಾತ್ರಿ 8 ಗಂಟೆಯೊಳಗೆ ಮುಚ್ಚುವಂತೆ ಸರ್ಕಾರ ನಿರ್ದೇಶನ ನೀಡಿದೆ.

ಗುರುವಾರದಿಂದ ಜಾರಿಗೆ ಬಂದಿರುವ ಹೊಸ ಆದೇಶದಂತೆ ವಾಣಿಜ್ಯ ಸಂಸ್ಥೆಗಳು ಬೆಳಿಗ್ಗೆ 11ರಿಂದ ರಾತ್ರಿ 8ರವರೆಗೆ ಮಾತ್ರ ಕಾರ್ಯನಿರ್ವಹಿಸಬಹುದಾಗಿದೆ. ಆದರೆ ಆಸ್ಪತ್ರೆಗಳು, ಔಷಧ ಅಂಗಡಿಗಳು ಹಾಗೂ ಆಹಾರ ಸಂಬಂಧಿತ ವ್ಯವಹಾರಗಳಿಗೆ ಈ ನಿಯಮದಿಂದ ವಿನಾಯಿತಿ ನೀಡಲಾಗಿದೆ.

**ಭಾರತದಿಂದ ಹೆಚ್ಚುವರಿ ಡೀಸೆಲ್‌ಗೆ ಮನವಿ**

ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಹಿನ್ನೆಲೆಯಲ್ಲಿ ಬಾಂಗ್ಲಾದೇಶ ಹೆಚ್ಚುವರಿ ಡೀಸೆಲ್ ಪೂರೈಕೆ ಮಾಡುವಂತೆ ಭಾರತವನ್ನು ಕೋರಿದೆ.

ಬಾಂಗ್ಲಾದೇಶದ ವಿದ್ಯುತ್, ಇಂಧನ ಮತ್ತು ಖನಿಜ ಸಂಪನ್ಮೂಲ ಸಚಿವ ಇಕ್ಬಾಲ್ ಹಸನ್ ಮಹಮೂದ್ ಅವರನ್ನು ಭಾರತ ಹೈಕಮಿಷನರ್ ದಿನೇಶ್ ತ್ರಿವೇದಿ ಇತ್ತೀಚೆಗೆ ಭೇಟಿ ಮಾಡಿ ವಿದ್ಯುತ್ ಮತ್ತು ಇಂಧನ ಕ್ಷೇತ್ರಗಳ ಸಹಕಾರ ಕುರಿತು ಚರ್ಚಿಸಿದರು.

ಭೇಟಿಯ ಬಳಿಕ ಮಾತನಾಡಿದ ಮಹಮೂದ್, ಡೀಸೆಲ್ ಕೊರತೆಯು ಅನಿಲ ಆಧಾರಿತ ವಿದ್ಯುತ್ ಉತ್ಪಾದನೆಯ ಮೇಲೂ ಪರಿಣಾಮ ಬೀರಿದ್ದು, ದೇಶಾದ್ಯಂತ ವಿದ್ಯುತ್ ಕಡಿತ ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ. ಭಾರತದಿಂದ ಈಗಾಗಲೇ ಗಡಿಯಾಚೆಗಿನ ಪೈಪ್‌ಲೈನ್ ಮೂಲಕ ಡೀಸೆಲ್ ಪೂರೈಕೆಯಾಗುತ್ತಿದ್ದು, ಹೆಚ್ಚುವರಿ ಪೂರೈಕೆಗೆ ಮನವಿ ಮಾಡಲಾಗಿದೆ ಎಂದರು.

**ಅನಿಲ ಕೊರತೆಯಿಂದ ವಿದ್ಯುತ್ ಉತ್ಪಾದನೆ ಇಳಿಕೆ**

ಬಾಂಗ್ಲಾದೇಶದ ವಿದ್ಯುತ್ ಉತ್ಪಾದನೆಗೆ ಅಗತ್ಯವಿರುವ ಅನಿಲ ಪೂರೈಕೆ ಕಡಿಮೆಯಾಗಿರುವುದರಿಂದ ರಾಷ್ಟ್ರೀಯ ವಿದ್ಯುತ್ ಗ್ರಿಡ್‌ನಲ್ಲಿ ಗರಿಷ್ಠ ಬೇಡಿಕೆಯ ಅವಧಿಯಲ್ಲಿ ನೂರಾರು ಮೆಗಾವ್ಯಾಟ್ ವಿದ್ಯುತ್ ಕೊರತೆ ಉಂಟಾಗಿದೆ. ಪರಿಣಾಮವಾಗಿ ಹಲವು ಪ್ರದೇಶಗಳಲ್ಲಿ ಲೋಡ್‌ಶೆಡ್ಡಿಂಗ್ ಜಾರಿಯಲ್ಲಿದೆ.

ಇದಕ್ಕೆ ಪೂರಕವಾಗಿ ಇರಾನ್ ಬಿಕ್ಕಟ್ಟಿನಿಂದ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಅಸ್ಥಿರತೆ ಹೆಚ್ಚಿದ್ದು, ಇಂಧನ ಹಾಗೂ ಎಲ್‌ಎನ್‌ಜಿ ಬೆಲೆಗಳಲ್ಲಿನ ಏರಿಳಿತವೂ ಬಾಂಗ್ಲಾದೇಶದ ಸಂಕಷ್ಟವನ್ನು ಮತ್ತಷ್ಟು ಗಂಭೀರಗೊಳಿಸಿದೆ.

ವಿದ್ಯುತ್ ಬಳಕೆ ಕಡಿತಗೊಳಿಸುವ ಕ್ರಮಗಳ ಜೊತೆಗೆ ಭಾರತದಿಂದ ಹೆಚ್ಚುವರಿ ಡೀಸೆಲ್ ಪಡೆಯುವ ಮೂಲಕ ಸದ್ಯದ ಬಿಕ್ಕಟ್ಟನ್ನು ನಿರ್ವಹಿಸಲು ಬಾಂಗ್ಲಾದೇಶ ಮುಂದಾಗಿದೆ.




ವಿಧಾನಸೌಧದ ಮುಂಭಾಗ ನಡೆಯಲಿರುವ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮಕ್ಕೆ ಗಣ್ಯರು ಹಾಗೂ ಸಾರ್ವಜನಿಕರು ಆಗಮಿಸುವ ಹಿನ್ನೆಲೆಯಲ್ಲಿ, ಸೊಳ್ಳೆಗಳ ಕಾಟ ನಿಯಂತ್ರಿಸಲು ಜಿಬಿಎ ಸಿಬ್ಬಂದಿ ಔಷಧಿ ಸಿಂಪಡಿಸುವ ಮೂಲಕ ಮುನ್ನೆಚ್ಚರಿಕಾ ಕ್ರಮ ಕೈಗೊಂಡರು.

## ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ

● ವಿಕ್ರಮ ವಾಹಿನಿ । ಬೆಂಗಳೂರು

ತಮಿಳುನಾಡಿಗೆ 12,000 ಕ್ಯೂಸೆಕ್ ಕಾವೇರಿ ನೀರು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ನಿರ್ದೇಶನ ವಿರೋಧಿಸಿ ವಾಟಾಳ್ ನಾಗರಾಜ್ ನೇತೃತ್ವದ ಕನ್ನಡ ಸಂಘಟನೆಗಳ ಒಕ್ಕೂಟ ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ರಾಜ್ಯಾದ್ಯಂತ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು.

ಬಂದ್‌ಗೆ ಆರಂಭದಲ್ಲಿ ಬೆಂಬಲ ಸೂಚಿಸಿದ್ದ ಹಲವು ಸಂಘಟನೆಗಳು ಬಳಿಕ ತಮ್ಮ ಬೆಂಬಲ ಹಿಂಪಡೆದ ಹಿನ್ನೆಲೆಯಲ್ಲಿ ಬೆಂಗಳೂರು, ಮೈಸೂರು, ಹಾಸನ, ಬಳ್ಳಾರಿ ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಜನಜೀವನ ಸಹಜವಾಗಿತ್ತು. ಅಂಗಡಿ–ಮುಂಗಟ್ಟುಗಳು, ಹೋಟೆಲ್‌ಗಳು, ಬಸ್ ಹಾಗೂ ಆಟೋ–ಟ್ಯಾಕ್ಸಿ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸಿದವು.

**ಮಂಡ್ಯದಲ್ಲಿ ತೀವ್ರ ಪ್ರತಿಭಟನೆ**

ಕಾವೇರಿ ಹೋರಾಟದ ಪ್ರಮುಖ ಕೇಂದ್ರವಾದ ಮಂಡ್ಯದಲ್ಲಿ ರೈತರು ಹಾಗೂ ಕನ್ನಡಪರ ಸಂಘಟನೆಗಳು ಖಾಲಿ ಮಡಿಕೆ ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು. ಬೆಂಗಳೂರು–ಮೈಸೂರು ಹಳೆಯ ಹೆದ್ದಾರಿಯಲ್ಲಿ ರಸ್ತೆ ತಡೆ ನಡೆಸಿ, 'ನಮ್ಮ ನೀರು, ನಮ್ಮ ಹಕ್ಕು' ಎಂದು ಘೋಷಣೆ ಕೂಗಿದರು. ತಮಿಳುನಾಡಿಗೆ ಯಾವುದೇ ನೀರು ಬಿಡಬಾರದು ಹಾಗೂ ರಾಜ್ಯದ ಹಿತಾಸಕ್ತಿ ಕಾಪಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

**ವಾಟಾಳ್ ನಾಗರಾಜ್ ಪೊಲೀಸ್ ವಶಕ್ಕೆ**

ಬಂದ್ ಹಿನ್ನೆಲೆಯಲ್ಲಿ ಬೆಂಗಳೂರಿನ ನಿವಾಸದಿಂದ ಹೊರಬಂದು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಮುಂದಾಗಿದ್ದ ವಾಟಾಳ್ ನಾಗರಾಜ್ ಅವರನ್ನು ಪೊಲೀಸರು ಮುನ್ನೆಚ್ಚರಿಕೆ ಕ್ರಮವಾಗಿ ವಶಕ್ಕೆ ಪಡೆದರು. ರ್‍ಯಾಲಿ ಹಾಗೂ ಪ್ರತಿಭಟನೆ ನಡೆಸಲು ಅವರು ಯೋಜಿಸಿದ್ದರು. ಇದಕ್ಕೂ ಮುನ್ನ ಅವರು ಬಾಯಿಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಮೌನ ಪ್ರತಿಭಟನೆ ನಡೆಸಿದರು.

**ಬೆಂಗಳೂರಿನಲ್ಲಿ ಸಹಜ ಸ್ಥಿತಿ**

ರಾಜಧಾನಿ ಬೆಂಗಳೂರಿನಲ್ಲಿ ಬಂದ್ ಯಾವುದೇ ಪರಿಣಾಮ ಬೀರಲಿಲ್ಲ. ಬಿಎಂಟಿಸಿ ಹಾಗೂ ಕೆಎಸ್‌ಆರ್‌ಟಿಸಿ ಬಸ್‌ಗಳು ಎಂದಿನಂತೆ ಸಂಚರಿಸಿದವು.

ಶಾಲಾ–ಕಾಲೇಜುಗಳು, ಅಂಗಡಿ–ಮುಂಗಟ್ಟುಗಳು ಹಾಗೂ ವಾಣಿಜ್ಯ ಚಟುವಟಿಕೆಗಳು ಸಾಮಾನ್ಯವಾಗಿದ್ದವು. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲೂ ವಿಮಾನ ಸಂಚಾರಕ್ಕೆ ಯಾವುದೇ ತೊಂದರೆಯಾಗಲಿಲ್ಲ.

ಮೈಸೂರಿನಲ್ಲೂ ಬಸ್, ಆಟೋ, ಟ್ಯಾಕ್ಸಿ ಸೇವೆಗಳು ಎಂದಿನಂತೆ ನಡೆದವು. ಪ್ರತಿಭಟನೆ ನಡೆಸಲು ಮುಂದಾದ ಕೆಲ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಕೊಪ್ಪಳದಲ್ಲಿ ಟೋಲ್‌ಗೇಟ್ ಬಳಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು ಲಾರಿಗಳನ್ನು ತಡೆದು ಚಾಲಕರಿಗೆ ಹೂವು ನೀಡಿ ಬಂದ್‌ಗೆ ಬೆಂಬಲ ಕೋರಿದರು.

**ಬಿಗಿ ಪೊಲೀಸ್ ಬಂದೋಬಸ್ತ್**

ಬಂದ್ ಹಿನ್ನೆಲೆಯಲ್ಲಿ ರಾಜ್ಯದ ಪ್ರಮುಖ ನಗರಗಳು ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಗಸ್ತು ಹಾಗೂ ಭದ್ರತಾ ವ್ಯವಸ್ಥೆ ಬಿಗಿಗೊಳಿಸಲಾಗಿತ್ತು.

ತಮಿಳುನಾಡಿಗೆ 15 ದಿನಗಳ ಕಾಲ 12,000 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ನೀಡಿರುವ ನಿರ್ದೇಶನದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಾವೇರಿ ವಿಚಾರ ಮತ್ತೆ ತೀವ್ರಗೊಂಡಿದೆ. ರಾಜ್ಯದ ಜಲಾಶಯಗಳಲ್ಲಿ ನೀರಿನ ಲಭ್ಯತೆ, ಕುಡಿಯುವ ನೀರು ಹಾಗೂ ಕೃಷಿ ಅಗತ್ಯಗಳನ್ನು ಪರಿಗಣಿಸಿ ಸರ್ಕಾರ ನಿರ್ಧಾರ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

### ಗುಣಮಟ್ಟದ ಆಹಾರ ಒದಗಿಸದಿದ್ದಲ್ಲಿ ಕ್ರಮ– ಯು.ಟಿ.ಖಾದರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಶಕ್ತಿ ಕೇಂದ್ರ ವಿಧಾನಸೌಧವೇ ಇರಲಿ, ಆರೋಗ್ಯ ಸೌಧವೇ ಇರಲಿ, ಇಂಟರ್ ನ್ಯಾಷನಲ್ ಲೆವೆಲ್ ನ ಯಾವುದೇ ತಾರಾ ಹೋಟೆಲ್ ಗಳಿರಲಿ ಉತ್ತಮ ಗುಣ ಮಟ್ಟದ ಉಪಹಾರ, ಆಹಾರ ನೀಡಬೇಕು. ಕ 'ಳಪೆ ಅಂತ ಕಂಡು ಬಂದಲ್ಲಿ ಅಂತಹ ಆಹಾರ ಕೇಂದ್ರಗಳ ಮಾಲೀಕರ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ.ಖಾದರ್ ಖಡಕ್ ಆಗಿ ಸೂಚನೆ ನೀಡಿದ್ದಾರೆ.



ವಿಧಾನಸಭೆ ಅಧಿವೇಶನದಲ್ಲಿ ಪಾಲ್ಗೊಂಡ ವೇಳೆ ತಮ್ಮನ್ನು ಭೇಟಿಯಾದ ಮಾಧ್ಯಮದವರು ವಿಧಾನಸೌಧದ ಕ್ಯಾಂಟೀನ್ ನಲ್ಲಿಯೇ ಜಿರಳೆ ಕಂಡು ಬಂದಿದೆ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಮಗೆ ಜನರ ಆರೋಗ್ಯ ರಕ್ಷಣೆ ನಮಗೆ ಮುಖ್ಯ. ತಂಗಳು ಆಹಾರ, ಉಪಹಾರ ತಿನ್ನಿಸುವುದು, ವಾರ, ತಿಂಗಳುಗಟ್ಟಲೆ ಖಾದ್ಯಗಳನ್ನು ಸಂಗ್ರಹಿಸಿಟ್ಟು ಸಾರ್ವಜನಿಕರಿಗೆ ನೀಡಿದರೆ ಅಂಥವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುತ್ತದೆ.

ಈಗಾಗಲೇ ನಮ್ಮ ಅಧಿಕಾರಿಗಳು ಪ್ರತಿಯೊಂದು ಹೋಟೆಲ್ ಗಳನ್ನೂ ಪರಿಶೋಧನೆ ನಡೆಸುತ್ತಿದ್ದಾರೆ. ಆಹಾರ ಉತ್ಪನ್ನ ಕೇಂದ್ರಗಳನ್ನು ಜಾಲಾಡುತ್ತಿದ್ದಾರೆ. ಎಷ್ಟೋ ಹೋಟೆಲ್ ಗಳಲ್ಲಿ ಕೋಳಿ ಮಾಂಸವನ್ನು ತಿಂಗಳುಗಟ್ಟಲೆ ಫ್ರಿಡ್ಜ್ ನಲ್ಲಿಟ್ಟು ಗ್ರಾಹಕರಿಗೆ ಬಿಸಿ ಮಾಡಿಕೊಡಲಾಗುತ್ತಿದೆ. ಮುಗ್ಧ ಜನರಿಗೆ ಹೋಟೆಲ್ ನವರ ಭಾನಗಡಿ ತಿಳಿಯದೇ ಸೇವಿಸಿ ಅನಾರೋಗ್ಯಕ್ಕೆ ಈಡಾಗುತ್ತಿದ್ದಾರೆ.

ಬೆಂಗಳೂರಿನ ಮಲ್ಟಿ ನ್ಯಾಷನಲ್ ಕಂಪನಿಗಳು ಕೆಲವು ಬಾರಿ ಒಂದು ವಾರ, ಹತ್ತು ದಿನ ಬಂದ್ ಮಾಡಿರುತ್ತಾರೆ. ಆಗ ಅಲ್ಲಿನ ಆಹಾರ ಉತ್ಪನ್ನ ಕೇಂದ್ರಗಳು ಇಂತಹ ಕಳಪೆ ಗುಣಮಟ್ಟದ ಆಹಾರ ನೀಡಲು ಫ್ರಿಜ್ ಅನ್ನು ಅವಲಂಬಿಸಿರುತ್ತವೆ. ಈ ಕುರಿತು ಇಲಾಖೆಯಿಂದ ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

## ಕಾರಾಗೃಹದಲ್ಲಿ ದೊರೆತ ಎಂಟು 5ಜಿ ಮೊಬೈಲ್‌ಗಳು ಆಕ್ಟಿವೇಟ್ ಆಗಿದ್ದು ಆಂಧ್ರದಲ್ಲಿ

● ವಿಕ್ರಮ ವಾಹಿನಿ । ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಮೊನ್ನೆ ಸಿಸಿಬಿ ಪೊಲೀಸರು ದಾಳಿ ಮಾಡಿದ ಸಂದರ್ಭದಲ್ಲಿ ಪತ್ತೆಯಾಗಿರುವ ಎಂಟು ಮೊಬೈಲ್‌ಗಳ ಸಿಮ್‌ಗಳು ಆಂಧ್ರದಲ್ಲಿ ಖರೀದಿಸಿರುವುದು ತನಿಖೆಯಿಂದ ಗೊತ್ತಾಗಿದೆ.

ಈ ಎಂಟು ಮೊಬೈಲ್‌ಗಳು 5ಜಿ ಎಂಬುವುದು ವಿಶೇಷವಾಗಿದ್ದು, ಆಂಧ್ರದಲ್ಲಿ ಆಕ್ಟಿವ್ ಆಗಿರುವುದು ಪೊಲೀಸರ ಇದುವರೆಗಿನ ತನಿಖೆಯಿಂದ ಬೆಳಕಿಗೆ ಬಂದಿದೆ.

ಈ ಕಾರಾಗೃಹದಲ್ಲಿ ತಪಾಸಣೆ ಕಟ್ಟುನಿಟ್ಟಾಗಿ ನಡೆಯುತ್ತಿದ್ದರೂ ಸಹ ನಿಷೇಧಿತ ವಸ್ತುಗಳು ಬ್ಯಾರಕ್‌ಗಳೊಳಗೆ ಹೇಗೆ ಹೋದವು ಎಂದು ಕಾರಾಗೃಹಗಳ ಡಿಜಿಪಿ ಅಲೋಕ್ ಕುಮಾರ್ ಅವರು ಆಶ್ಚರ್ಯ ವ್ಯಕ್ತಪಡಿಸಿದ್ದಾರೆ.

ಜೈಲಿನೊಳಗೆ ಜಾಮರ್ ಅಳವಡಿಸಿದ್ದರೂ ಸಹ ಮೊಬೈಲ್‌ಗಳನ್ನು ಹೇಗೆ ಬಳಸುತ್ತಿದ್ದರು ಎಂಬ ಬಗ್ಗೆ ಮಾಹಿತಿಗಳನ್ನು ಕಲೆ ಹಾಕಲಾಗುತ್ತಿದೆ. ಅಷ್ಟೆ ಅಲ್ಲದೇ ಈ ಮೊಬೈಲ್‌ನ್ನು ಯಾರು ತಂದು ಕೊಟ್ಟಿದ್ದಾರೆ, ಎಲ್ಲಿಂದ ತಂದುಕೊಟ್ಟಿದ್ದಾರೆ ಎಂಬುವುದರ ಬಗ್ಗೆಯೂ ತನಿಖೆ ಮುಂದುವರೆದಿದೆ. ಈ ಹಿನ್ನೆಲೆಯಲ್ಲಿ ತನಿಖೆಗೆ ಡಿಐಜಿ ಜಿನೇಂದ್ರ ಕಣಗಲಿ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿದೆ. ಅವರು ಈಗಾಗಲೇ ತನಿಖೆ ಆರಂಭಿಸಿದ್ದಾರೆ.

ಕಾರಾಗೃಹದೊಳಗೆ ಮೊಬೈಲ್ ಪತ್ತೆಯಾದ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಸಹ ದಾಖಲಾಗಿದೆ.ಸಿಸಿಬಿ ಪೊಲೀಸರ ದಾಳಿ ಸಂದರ್ಭದಲ್ಲಿ ಖೈದಿ ಹಾಗೂ ವಿಚಾರಣಾಧೀನ ಖೈದಿಗಳಿದ್ದ ಬ್ಯಾರಕ್‌ನಲ್ಲಿ ಪತ್ತೆಯಾದ ಮೊಬೈಲ್ ಪಾಸ್‌ವರ್ಡ್ ಬಗ್ಗೆ ಅವರುಗಳು ಮಾಹಿತಿ ನೀಡಲಿಲ್ಲ ಹಾಗಾಗಿ ಆ ಮೊಬೈಲ್‌ನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ. ಅದರ ವರದಿ ಬಂದನಂತರವಷ್ಟೆ ಮೊಬೈಲ್‌ಗಳಲ್ಲಿರುವ ಇನ್ನಷ್ಟು ಮಾಹಿತಿಗಳು ಲಭ್ಯವಾಗಲಿವೆ.

ಈ ಕಾರಾಗೃದ ಮೇಲೆ ದಾಳಿ ಮಾಡಿ ತಪಾಸಣೆ ನಡೆಸಿದ ಸಂದರ್ಭದಲ್ಲಿ 8 ತಿಂಗಳ ಅವಧಿಯಲ್ಲಿ 300ಕ್ಕೂ ಹೆಚ್ಚು ಮೊಬೈಲ್‌ಗಳು ಸಿಕ್ಕಿದ್ದವು. ಇದೀಗ ಮತ್ತೆ ಬ್ಯಾರಕ್‌ಗಳೊಳಗೆ ಮೊಬೈಲ್‌ಗಳು ಪತ್ತೆಯಾಗಿರುವುದು ಕಾರಾಗೃಹ ಸಿಬ್ಬಂದಿಯ ಕರ್ತವ್ಯ ಲೋಪವನ್ನು ಪ್ರಶ್ನಿಸುವಂತಾಗಿದೆ.

ಈ ಪ್ರಕರಣದ ಹಿನ್ನೆಲೆಯಲ್ಲಿ ಕಾರಾಗೃಹದ ಭದ್ರತಾ ವ್ಯವಸ್ಥೆ ಹಾಗೂ ಸಿಬ್ಬಂದಿಯ ಕಾರ್ಯವೈಖರಿ ಕುರಿತು ಅಧಿಕಾರಿಗಳು ಹೆಚ್ಚಿನ ಪರಿಶೀಲನೆ ನಡೆಸುತ್ತಿದ್ದಾರೆ. ನಿಷೇಧಿತ ವಸ್ತುಗಳು ಜೈಲಿನೊಳಗೆ ಪ್ರವೇಶಿಸುವ ಮಾರ್ಗವನ್ನು ಪತ್ತೆಹಚ್ಚಿ, ಇದಕ್ಕೆ ಸಹಕರಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

ಮೊಬೈಲ್‌ಗಳ ಬಳಕೆಯ ಹಿಂದೆ ಕೈದಿಗಳಿಗೆ ಹೊರಗಿನ ವ್ಯಕ್ತಿಗಳಿಂದ ನೆರವು ದೊರೆತಿದೆಯೇ ಎಂಬ ಬಗ್ಗೆಯೂ ತನಿಖಾ ತಂಡ ಮಾಹಿತಿ ಕಲೆಹಾಕುತ್ತಿದೆ. ಎಫ್‌ಎಸ್‌ಎಲ್ ವರದಿ ಹಾಗೂ ವಿಶೇಷ ತಂಡದ ತನಿಖೆಯ ಬಳಿಕ ಪ್ರಕರಣದ ಸಂಪೂರ್ಣ ಚಿತ್ರಣ ಸ್ಪಷ್ಟವಾಗುವ ನಿರೀಕ್ಷೆಯಿದೆ.

ಈ ಮೊಬೈಲ್‌ಗಳ ಮೂಲಕ ಜೈಲಿನೊಳಗಿನಿಂದ ಹೊರಗಿನ ವ್ಯಕ್ತಿಗಳೊಂದಿಗೆ ಸಂಪರ್ಕ ಸಾಧಿಸಲಾಗುತ್ತಿತ್ತೇ ಎಂಬ ಬಗ್ಗೆಯೂ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

## ಬಾಲಕನ ಸಮಯಪ್ರಜ್ಞೆಗೆ ಸಿಎಂ ಶಹಬ್ಬಾಸ್

● ವಿಕ್ರಮ ವಾಹಿನಿ । ಬಂಟ್ವಾಳ

ವಿದ್ಯುತ್ ಚಾಲಿತ ಕಾಯಿ ತುರಿಯುವ ಯಂತ್ರಕ್ಕೆ ಬಿಸಿಯೂಟದ ಸಿಬ್ಬಂದಿಯ ಕೈಬೆರಳು ಸಿಲುಕಿದಾಗ ತಕ್ಷಣ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಸಂಭವಿಸಬಹುದಾಗಿದ್ದ ಅನಾಹುತವನ್ನು ತಪ್ಪಿಸಿದ ಐದನೇ ತರಗತಿ ವಿದ್ಯಾರ್ಥಿಯ ಸಮಯಪ್ರಜ್ಞೆ ಹಾಗೂ ಧೈರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಬಂಟ್ವಾಳ ತಾಲೂಕಿನ ನರಿಕೊಂಬು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಘಟನೆ ನಡೆದಿದೆ.



ಅಕ್ಷರ ದಾಸೋಹದ ಸಿಬ್ಬಂದಿಯೊಬ್ಬರು ಕಾಯಿ ತುರಿಯುತ್ತಿದ್ದ ವೇಳೆ ಆಕಸ್ಮಿಕವಾಗಿ ಅವರ ಕೈಬೆರಳು ತುರಿಮಣೆಗೆ ಸಿಲುಕಿಕೊಂಡಿದೆ. ನೋವಿನಿಂದ ಅವರು ಕಿರುಚಿದಾಗ ಅಲ್ಲೇ ಇದ್ದ ವಿದ್ಯಾರ್ಥಿ ಮನ್ವಿತ್ ಕೂಡಲೇ ಪರಿಸ್ಥಿತಿಯನ್ನು ಗಮನಿಸಿ ಯಂತ್ರದ ಸ್ವಿಚ್ ಆಫ್ ಮಾಡಿದ್ದಾನೆ. ಬಳಿಕ ಶಿಕ್ಷಕರಿಗೆ ವಿಷಯ ತಿಳಿಸಿದ್ದಾನೆ.

"ನಾನು ಶೌಚಾಲಯಕ್ಕೆ ಹೋಗುತ್ತಿದ್ದಾಗ ಬೊಬ್ಬೆ ಹಾಕುವ ಸದ್ದು ಕೇಳಿಸಿತು. ಕೂಡಲೇ ಅಲ್ಲಿಗೆ ತೆರಳಿ ತುರಿಮಣೆಯ ಸ್ವಿಚ್ ಆಫ್ ಮಾಡಿದೆ. ನಂತರ ಶಿಕ್ಷಕರಿಗೆ ತಿಳಿಸಿದೆ" ಎಂದು ಮನ್ವಿತ್ ತಿಳಿಸಿದ್ದಾನೆ.

"ಕಾಯಿ ತುರಿಯುತ್ತಿದ್ದಾಗ ಬೆರಳು ಸಿಲುಕಿಕೊಂಡಿತ್ತು. ಆ ಸಮಯದಲ್ಲಿ ಹುಡುಗ ದೇವರಂತೆ ಬಂದು ಕಾಪಾಡಿದ" ಎಂದು ಬಿಸಿಯೂಟದ ಸಿಬ್ಬಂದಿ ಮನ್ವಿತ್‌ನ ಸಮಯಪ್ರಜ್ಞೆಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಬಾಲಕನ ಧೈರ್ಯ ಮತ್ತು ಸಮಯಪ್ರಜ್ಞೆಯನ್ನು ಶಾಲೆಯ ಶಿಕ್ಷಕರು, ಸಿಬ್ಬಂದಿ, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ರವಿ ಅಂಚನ್ ಹಾಗೂ ಸದಸ್ಯರು ಶ್ಲಾಘಿಸಿದ್ದಾರೆ. ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ನೋಣಯ್ಯ ನಾಯ್ಕ್ ಹಾಗೂ ಸಿಆರ್‌ಪಿ ಜ್ಯೋತಿ ಶಾಲೆಗೆ ಭೇಟಿ ನೀಡಿ ಬಾಲಕನ ಕಾರ್ಯವನ್ನು ಮೆಚ್ಚಿದ್ದಾರೆ.

### ಸಿಎಂ ಮೆಚ್ಚುಗೆ

ಮನ್ವಿತ್‌ನ ಸಮಯಪ್ರಜ್ಞೆಯನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೂಡ ಮೆಚ್ಚಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅಭಿನಂದನೆ ಸಲ್ಲಿಸಿರುವ ಅವರು, ಬಾಲಕನ ಒಂದು ಕ್ಷಣದ ಜಾಗರೂಕತೆ ಹಾಗೂ ಸರಿಯಾದ ನಿರ್ಧಾರ ದೊಡ್ಡ ಅಪಾಯವನ್ನು ತಪ್ಪಿಸಿದೆ ಎಂದು ಶ್ಲಾಘಿಸಿದ್ದಾರೆ.

"ಮನ್ವಿತ್‌ನ ಮಾನವೀಯ ಕಾಳಜಿ, ಧೈರ್ಯ ಮತ್ತು ಸಮಯಪ್ರಜ್ಞೆ ಎಲ್ಲರಿಗೂ ಮಾದರಿಯಾಗಲಿ. ಆತ ಉತ್ತಮ ಪ್ರಜೆಯಾಗಿ ಬೆಳೆದು ನಾಡಿಗೆ ಕೀರ್ತಿ ತರಲಿ" ಎಂದು ಸಿಎಂ ಹಾರೈಸಿದ್ದಾರೆ.



ಮುಖ್ಯಮಂತ್ರಿಯಾದ ಬಳಿಕ ನಡೆದ ಮೊದಲ ವಿಧಾನಸಭಾ ಅಧಿವೇಶನದ ಕಲಾಪದಲ್ಲಿ ಪಾಲ್ಗೊಳ್ಳಲು ಗುರುವಾರ ವಿಧಾನಸಭೆ ಪ್ರವೇಶಿಸುವ ಮುನ್ನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬಾಗಿಲಿಗೆ ನಮಸ್ಕರಿಸಿದರು. ಬಳಿಕ ಮುಖ್ಯಮಂತ್ರಿಯವರ ಪೀಠಕ್ಕೂ ನಮಸ್ಕರಿಸಿ ಸದನ ಪ್ರವೇಶಿಸಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸನಿ ವಾಹಿನಿ

ಪ್ರಯತ್ನ ಯಾವತ್ತೂ ವ್ಯರ್ಥವಾಗಲ್ಲ. ನಿಮ್ಮ ಕೆಲಸವನ್ನು ನೀವು ಪ್ರಾಮಾಣಿಕವಾಗಿ ಮಾಡಿ ಪ್ರತಿಫಲ ತಾನಾಗಿಯೇ ನಿಮ್ಮನ್ನು ಹುಡುಕಿಕೊಂಡು ಬರುತ್ತದೆ.

### ದಿನ ಪಂಚಾಂಗ

ಆಗಸ್ಟ್, 14-2026 ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ಬಿದಿಗೆ ತಿಥಿ ರಾ-8:26
ಮಖ ನಕ್ಷತ್ರ ಬೆ-6:58
ರಾಹುಕಾಲ ಬೆ-10:50-12:24
ಆಡಿ ಶುಕ್ರವಾರ, ಲೋಕಾಪುರ ಬಾಲಭುಜಂಗಸ್ವಾಮಿ ಆರಾಧನೆ, ವಿಜಾಪುರ । ಹೊನ್ನುಟಗಿ ವೀರಸಿದ್ಧೇಶ್ವರ ಕಾರ್ತೀಕ, ಜಗದ್ಗುರು ಶಿವಾನಂದ ಸ್ವಾಮಿ ಪುಣ್ಯದಿನ, ರಂಭಾಪುರಿ ಶಿವಾನಂದ ರಾಜೇಂದ್ರ ಪುಣ್ಯದಿನ, ಗುಲ್ಬರ್ಗಾ ಮಕ್ತಂಪುರ ಗದ್ದುಗೆಮಠ ಜಂಗಮ ಪಾದಪೂಜೆ, ಚಂದ್ರದರ್ಶನ, ಚಿತ್ರಹಳ್ಳಿ ಜಾತ್ರೆ, ಲೋಕಾಪುರ ಬಾಲಭುಜಂಗ ಆರಾಧನೆ

# ಸುಧಾಕರ್ ಹೆಸರಲ್ಲಿ ನೀರಾವರಿ ಯೋಜನೆ: ಡಿ.ಕೆ.ಶಿ

● ವಿಕ್ರಮ ವಾಹಿನಿ । ಬೆಂಗಳೂರು



"ಹುಟ್ಟು ನಮ್ಮದಲ್ಲ, ಸಾವು ನಮ್ಮದಲ್ಲ. ಹುಟ್ಟು ಮತ್ತು ಸಾವಿನ ನಡುವಿನ ಬದುಕು ಮಾತ್ರ ನಮ್ಮದು. ಸಾವಿನ ಯಜಮಾನ ಭಗವಂತ. ಈ ಜಗತ್ತಿನ ತೋಟಗಾರ ಅವನೇ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನದಲ್ಲಿ ಇತ್ತೀಚೆಗೆ ನಿಧನರಾದ ಗಣ್ಯರು, ರಾಜಕೀಯ ನಾಯಕರು ಹಾಗೂ ಸಾಧಕರಿಗೆ ಸಂತಾಪ ಸೂಚಿಸುವ ನಿರ್ಣಯದ ಮೇಲೆ ಮಾತನಾಡಿದ ಅವರು, ಶ್ಲೋಕ ಹಾಗೂ ಸುಭಾಷಿತಗಳ ಮೂಲಕ ಜೀವನದ ಅನಿತ್ಯತೆ ಮತ್ತು ಸಾವಿನ ಸತ್ಯವನ್ನು ವಿವರಿಸಿದರು.

ತಮ್ಮ ಆತ್ಮೀಯ ಗೆಳೆಯ ಹಾಗೂ ಮಾಜಿ ಸಚಿವ ಡಿ. ಸುಧಾಕರ್ ಅವರ ನಿಧನವನ್ನು ಸ್ಮರಿಸಿದ ಶಿವಕುಮಾರ್, "ಸುಧಾಕರ್ ನನ್ನನ್ನು ಮುಖ್ಯಮಂತ್ರಿಯಾಗಿ ನೋಡಬೇಕು ಎಂದು ಬಹಳ ಆಸೆಪಟ್ಟಿದ್ದರು. ಅವರ ಸಾವು ನಮಗೆ ಕಷ್ಟದಿಂದಲೇ ಒಪ್ಪಿಕೊಳ್ಳಬೇಕಾದ ಪರಿಸ್ಥಿತಿ ತಂದಿದೆ. ಅವರು ಸೌಮ್ಯ ಸ್ವಭಾವದ, ಹಸನ್ಮುಖಿ ರಾಜಕಾರಣಿಯಾಗಿದ್ದರು" ಎಂದು ಭಾವುಕರಾದರು.

ಸುಧಾಕರ್ ಅವರು ನೀರಾವರಿ ಅಭಿವೃದ್ಧಿ ಕುರಿತು ಹಲವು ಕನಸುಗಳನ್ನು ಹೊಂದಿದ್ದರು. ಅವರ ನೆನಪನ್ನು ಶಾಶ್ವತಗೊಳಿಸುವ ಉದ್ದೇಶದಿಂದ ಚಿತ್ರದುರ್ಗ ಜಿಲ್ಲೆಯ ಪ್ರಮುಖ ಸಣ್ಣ ನೀರಾವರಿ ಯೋಜನೆಗೆ ಅವರ ಹೆಸರಿಡಲು ನಿರ್ಧರಿಸಿರುವುದಾಗಿ ಮುಖ್ಯಮಂತ್ರಿ ಘೋಷಿಸಿದರು.

ಮಾಜಿ ಸಚಿವ ಹಾಗೂ ಶಾಸಕ ವೆಂಕಟರಮಣಪ್ಪ, ಮಾಜಿ ಸಚಿವ ರಾಮಚಂದ್ರೇಗೌಡ, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ನಿ ಚನ್ನಮ್ಮ, ಮಾಜಿ ಸಚಿವ ಹನುಮಂತಪ್ಪ, ಸಯ್ಯದ್ ಯಾಸೀನ್, ವೆಂಕಟಾಚಲಯ್ಯ ಹಾಗೂ ವೀರಣ್ಣ ಸೇರಿದಂತೆ ಅಗಲಿದ ಗಣ್ಯರ ಸಾರ್ವಜನಿಕ ಸೇವೆಯನ್ನು ಮುಖ್ಯಮಂತ್ರಿ ಸ್ಮರಿಸಿದರು. ಚನ್ನಮ್ಮ ಅವರ ಸರಳ ಜೀವನ ಹಾಗೂ ಕುಟುಂಬಕ್ಕೆ ನೀಡಿದ ಮಾರ್ಗದರ್ಶನವನ್ನು ಕೊಂಡಾಡಿದ ಅವರು, ಅವರಿಗೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲು ಸರ್ಕಾರ ಕೈಗೊಂಡ ನಿರ್ಧಾರವನ್ನು ಸಮರ್ಥಿಸಿಕೊಂಡರು.

ಖ್ಯಾತ ಗಾಯಕಿ ಎಸ್. ಜಾನಕಿ ಅವರನ್ನು ಸ್ಮರಿಸಿದ ಶಿವಕುಮಾರ್, "ಪ್ರೀತಿ, ನೋವು, ಭಕ್ತಿ, ತಾಯ್ತನ ಹಾಗೂ ಗೆಳೆತನಕ್ಕೆ ತಮ್ಮ ಧ್ವನಿಯ ಮೂಲಕ ಜೀವ ತುಂಬಿದ ಮಹಾನ್ ಕಲಾವಿದೆ. ಕಲಾವಿದರಿಗೆ ಸಾವಿಲ್ಲ; ಅವರ ಧ್ವನಿಯ ಮೂಲಕ ಅವರು ಸದಾ ಜೀವಂತವಾಗಿರುತ್ತಾರೆ" ಎಂದರು.

"ಸಾವು ಯಾರನ್ನೂ ಕೇಳಿ ಬರುವುದಿಲ್ಲ. ನಾಳೆ ಎಂದು ಸಾವನ್ನು ಮುಂದೂಡಲು ಸಾಧ್ಯವಿಲ್ಲ. ಆದ್ದರಿಂದ ನಮ್ಮೊಂದಿಗೆ ಇರುವವರ ಮೌಲ್ಯವನ್ನು ಅವರು ಇರುವಾಗಲೇ ಅರಿತುಕೊಳ್ಳಬೇಕು" ಎಂದು ಮುಖ್ಯಮಂತ್ರಿ ಹೇಳಿದರು.

### ಆರೋಗ್ಯ

# ಅಂಗಾಂಗ ದಾನ ಹೆಚ್ಚಿದರೂ ಕಿಡ್ನಿಗೆ ಕಾದಾಟ!

ಕರ್ನಾಟಕದಲ್ಲಿ ಕಳೆದ ಒಂದು ದಶಕದಲ್ಲಿ ಅಂಗಾಂಗ ದಾನದ ಪ್ರಮಾಣ ಗಣನೀಯವಾಗಿ ಹೆಚ್ಚಿದ್ದರೂ, ಕಿಡ್ನಿ ಕಸಿಗಾಗಿ ಸಾವಿರಾರು ರೋಗಿಗಳು ವರ್ಷಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಮುಂದುವರಿದಿದೆ. 2025ರಲ್ಲಿ ರಾಜ್ಯವು ಅಂಗಾಂಗ ದಾನದಲ್ಲಿ ದೇಶದಲ್ಲೇ ಮೂರನೇ ಸ್ಥಾನ ಪಡೆದಿದ್ದು, ದಾನಿಗಳ ಸಂಖ್ಯೆ ಸಾರ್ವಕಾಲಿಕ ಗರಿಷ್ಠ ಮಟ್ಟ ತಲುಪಿದೆ. ಆದರೂ ಅಗತ್ಯಕ್ಕೆ ತಕ್ಕಷ್ಟು ಅಂಗಾಂಗಗಳು ಲಭ್ಯವಾಗದಿರುವುದು ಸವಾಲಾಗಿ ಉಳಿದಿದೆ.

ಅಂಕಿ-ಅಂಶಗಳ ಪ್ರಕಾರ, 2015ರಲ್ಲಿ ರಾಜ್ಯದಲ್ಲಿ ಕೇವಲ 60 ಅಂಗಾಂಗ ದಾನಗಳು ದಾಖಲಾಗಿದ್ದರೆ, 2025ರಲ್ಲಿ ಈ ಸಂಖ್ಯೆ 198ಕ್ಕೆ ಏರಿಕೆಯಾಗಿದೆ. 2026ರ ಜುಲೈವರೆಗೆ 121 ಅಂಗಾಂಗ ದಾನಗಳು ನಡೆದಿವೆ. ಇದರಿಂದ ಅಂಗಾಂಗ ದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ನಿಧಾನವಾಗಿ ಹೆಚ್ಚುತ್ತಿರುವುದು ಗೋಚರಿಸುತ್ತದೆ.

**ಕಿಡ್ನಿಗೆ ಅತಿ ಹೆಚ್ಚು ಬೇಡಿಕೆ:** ರಾಜ್ಯದಲ್ಲಿ ಇದುವರೆಗೆ 2,145 ಕಿಡ್ನಿ ಕಸಿ ಶಸ್ತ್ರಚಿಕಿತ್ಸೆಗಳು ನಡೆದಿದ್ದರೂ, ಇನ್ನೂ 5,153 ಮಂದಿ ಕಿಡ್ನಿ ಕಸಿಗಾಗಿ ಕಾಯುವಿಕೆ ಪಟ್ಟಿಯಲ್ಲಿದ್ದಾರೆ. ಸಾಮಾನ್ಯವಾಗಿ ಕಿಡ್ನಿ ಕಸಿಗಾಗಿ ರೋಗಿಗಳು ಸುಮಾರು 2.5ರಿಂದ 3 ವರ್ಷಗಳವರೆಗೆ ಕಾಯಬೇಕಾಗುತ್ತಿದೆ. ಯಕೃತ್ತಿನ ಕಸಿಗೆ 1ರಿಂದ 1.5 ವರ್ಷ ಹಾಗೂ ಹೃದಯ ಕಸಿಗೆ 3ರಿಂದ 4 ತಿಂಗಳವರೆಗೆ ಕಾಯುವ ಪರಿಸ್ಥಿತಿ ಇದೆ.

ಆರೋಗ್ಯ ತಜ್ಞರ ಪ್ರಕಾರ, ರಾಜ್ಯದಲ್ಲಿ ನಡೆಯುತ್ತಿರುವ ಸುಮಾರು 85ರಷ್ಟು ಅಂಗಾಂಗ ದಾನಗಳು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಸೀಮಿತವಾಗಿವೆ. ರಾಜ್ಯದಲ್ಲಿರುವ ಸಂಪೂರ್ಣ ಸಾಮರ್ಥ್ಯಕ್ಕೆ ಹೋಲಿಸಿದರೆ ಕೇವಲ ಶೇ.1ರಿಂದ 2ರಷ್ಟನ್ನು ಮಾತ್ರ ಬಳಸಿಕೊಳ್ಳಲಾಗುತ್ತಿದೆ. ಹೀಗಾಗಿ ಜಿಲ್ಲಾ ಮಟ್ಟದಲ್ಲೂ ಅಂಗಾಂಗ ದಾನ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ.

**ಬ್ರೈನ್ ಡೆಡ್ ಅರಿವು ಅಗತ್ಯ:** ಅಂಗಾಂಗ ದಾನಕ್ಕೆ ಕುಟುಂಬದ ಒಪ್ಪಿಗೆ ಪ್ರಮುಖ ಅಂಶವಾಗಿದೆ. ವ್ಯಕ್ತಿಯು ಜೀವಿತಾವಧಿಯಲ್ಲಿ ಅಂಗಾಂಗ ದಾನಕ್ಕೆ ಒಪ್ಪಿಗೆ ನೀಡಿದ್ದರೂ, ಕುಟುಂಬದೊಂದಿಗೆ ಈ ಕುರಿತು ಮುಂಚಿತವಾಗಿ ಚರ್ಚಿಸದಿದ್ದರೆ ಅಂತಿಮ ಹಂತದಲ್ಲಿ ದಾನಕ್ಕೆ ಒಪ್ಪಿಗೆ ಸಿಗದಿರುವ ಪ್ರಕರಣಗಳಿವೆ.

ಮತ್ತೊಂದೆಡೆ, 'ಬ್ರೈನ್ ಡೆಡ್' ಎಂದರೆ ವ್ಯಕ್ತಿ ಮೃತಪಟ್ಟಿರುವ ವೈದ್ಯಕೀಯ ಸ್ಥಿತಿ ಎಂಬುದರ ಕುರಿತು ಜನರಲ್ಲಿ ಇನ್ನೂ ಸಾಕಷ್ಟು ಅರಿವು ಇಲ್ಲ. ಹೃದಯ ಬಡಿತ ಮುಂದುವರಿಯುತ್ತಿರುವುದನ್ನು ಕಂಡು ಕುಟುಂಬಸ್ಥರು ಅಂಗಾಂಗ ದಾನಕ್ಕೆ ಹಿಂಜರಿಯುವ ಸಾಧ್ಯತೆ ಇದೆ. ಧಾರ್ಮಿಕ ನಂಬಿಕೆಗಳು, ದೇಹದ ಸ್ವರೂಪ ಬದಲಾಗುತ್ತದೆ ಎಂಬ ಭಯ ಹಾಗೂ ವಿವಿಧ ಮೂಢನಂಬಿಕೆಗಳೂ ದಾನಕ್ಕೆ ಅಡ್ಡಿಯಾಗುತ್ತಿವೆ.

**ಜಿಲ್ಲೆಗಳಲ್ಲೂ ವ್ಯವಸ್ಥೆ ಬಲಪಡಿಸಲು ಒತ್ತು:** ಈ ಸಮಸ್ಯೆ ನಿವಾರಣೆಗೆ ಜಿಲ್ಲಾ ಮಟ್ಟದ ಸರ್ಕಾರಿ ಆಸ್ಪತ್ರೆಗಳು ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿ ಬ್ರೈನ್ ಡೆಡ್ ಪ್ರಕರಣಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಇಂತಹ ಆಸ್ಪತ್ರೆಗಳನ್ನು ಅಂಗಾಂಗ ಮರುಪಡೆಯುವಿಕೆ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವುದರಿಂದ ದಾನಿಗಳ ಸಂಖ್ಯೆ ಮತ್ತಷ್ಟು ಹೆಚ್ಚಬಹುದು.

ಆರೋಗ್ಯ ಇಲಾಖೆಯು ಜಿಲ್ಲಾ ಆಸ್ಪತ್ರೆಗಳಲ್ಲಿ ತರಬೇತಿ ಪಡೆದ ಕೌನ್ಸಿಲರ್‌ಗಳನ್ನು ನಿಯೋಜಿಸಿ, ಬ್ರೈನ್ ಡೆಡ್ ರೋಗಿಗಳ ಕುಟುಂಬದವರಿಗೆ ಅಂಗಾಂಗ ದಾನದ ಮಹತ್ವವನ್ನು ವಿವರಿಸುವ ಹಾಗೂ ದಾನ ಪ್ರಕ್ರಿಯೆಯನ್ನು ಸುಗಮಗೊಳಿಸುವ ಕಾರ್ಯತಂತ್ರ ರೂಪಿಸುತ್ತಿದೆ. ದಾನಿಗಳ ಸಂಖ್ಯೆ ಹೆಚ್ಚಿಸುವುದರ ಜತೆಗೆ, ಲಭ್ಯವಾಗುವ ಅಂಗಾಂಗಗಳನ್ನು ಅಗತ್ಯವಿರುವ ರೋಗಿಗಳಿಗೆ ತ್ವರಿತವಾಗಿ ತಲುಪಿಸುವ ವ್ಯವಸ್ಥೆ ಬಲಪಡಿಸುವುದು ಮುಂದಿನ ಪ್ರಮುಖ ಗುರಿಯಾಗಿದೆ.

# ಆದಿವಾಸಿ ಮತ್ತು ಅಲೆಮಾರಿ ಆಯೋಗ ರಚನೆಗೆ ಸಿಎಂ ಡಿ ಕೆ ಶಿವಕುಮಾರ್ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ಆದಿವಾಸಿ ಮತ್ತು ಅಲೆಮಾರಿ ಸಮುದಾಯಗಳ ಅಭಿವೃದ್ಧಿಗೆ ವಿಶೇಷ ಆಯೋಗ ರಚನೆಗೆ ಸಿಎಂ ಡಿ ಕೆ ಶಿವಕುಮಾರ್ ಆದೇಶ ಹೊರಡಿಸಿದ್ದಾರೆ.

ಇತ್ತೀಚೆಗಷ್ಟೇ ವಿಶ್ವ ಆದಿವಾಸಿ ದಿನಾಚಾರಣೆ ಕಾರ್ಯಕ್ರಮದಲ್ಲಿ ಈ ವಿಶೇಷ ಆಯೋಗ ರಚನೆಗೆ ಬೇಡಿಕೆ ನೀಡಲಾಗಿತ್ತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಒಂದು ತಿಂಗಳಲ್ಲಿ ಆಯೋಗ ರಚಿಸುವ ವಾಗ್ದಾನ ನೀಡಿದ್ದರು. ಈಗ ಎರಡೇ ದಿನದಲ್ಲಿ ಈ ಆದೇಶ ಹೊರಡಿಸುವ ಮೂಲಕ ಡಿ ಕೆ ಶಿವಕುಮಾರ್ ಅವರು ನುಡಿದಂತೆ ನಡೆದಿದ್ದಾರೆ.

ಕರ್ನಾಟಕದಲ್ಲಿ ವಾಸಿಸುತ್ತಿರುವ ಆದಿವಾಸಿ ಮತ್ತು ಅಲೆಮಾರಿ ಸಮುದಾಯಗಳು ಇಂದಿಗೂ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಹಲವು ಸವಾಲುಗಳನ್ನು ಎದುರಿಸುತ್ತಿವೆ. ಈ ಹಿನ್ನೆಲೆಯಲ್ಲಿ ಅವರ ಅಭಿವೃದ್ಧಿ, ಹಕ್ಕುಗಳ ರಕ್ಷಣೆ ಹಾಗೂ ಸಾಮಾಜಿಕ ನ್ಯಾಯವನ್ನು ಒದಗಿಸುವ ಸಲುವಾಗಿ ವಿಶೇಷ ಆಯೋಗವನ್ನು ರಚಿಸಲು ಸರ್ಕಾರ ನಿರ್ಧರಿಸಿದೆ.

ಉತ್ತಮ ಶಿಕ್ಷಣ, ಪೌಷ್ಟಿಕ ಆಹಾರ, ಗುಣಮಟ್ಟದ ಆರೋಗ್ಯ ಸೇವೆ, ವಸತಿ, ಕುಡಿಯುವ ನೀರು, ರಸ್ತೆ, ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸುವುದರ ಜೊತೆಗೆ, ಯುವಜನರಿಗೆ ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಗಳನ್ನು ಕಲ್ಪಿಸುವುದೇ ಸರ್ಕಾರದ ಮುಖ್ಯ ಉದ್ದೇಶವಾಗಿದೆ. ಆದಿವಾಸಿ ಮತ್ತು ಅಲೆಮಾರಿ ಸಮುದಾಯಗಳ ಬದುಕಿನಲ್ಲಿ ಹೊಸ ಭರವಸೆ ಮೂಡಿಸುವುದರ ಜೊತೆಗೆ ಸಮಾನ ಅವಕಾಶಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ.

ಆಯೋಗವು ಆದಿವಾಸಿ ಮತ್ತು ಅಲೆಮಾರಿ ಸಮುದಾಯಗಳ ಜನಸಂಖ್ಯೆ, ಸಾಮಾಜಿಕ-ಆರ್ಥಿಕ ಸ್ಥಿತಿಗತಿ ಹಾಗೂ ಶಿಕ್ಷಣ ಮತ್ತು ಉದ್ಯೋಗದ ಅವಕಾಶಗಳ ಕುರಿತು ಸಮಗ್ರ ಅಧ್ಯಯನ ನಡೆಸಲಿದೆ.

# ಮೇಕೆದಾಟು ಯೋಜನೆಗೆ ವೇಗ: ಚಲುವರಾಯಸ್ವಾಮಿ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದ ಮಹತ್ವಾಕಾಂಕ್ಷೆಯ ಮೇಕೆದಾಟು ಕುಡಿಯುವ ನೀರಿನ ಯೋಜನೆಗೆ ವೇಗ ನೀಡುವಂತೆ ನೂತನ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಸಚಿವರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಜಲಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಯೋಜನೆಯ ಪ್ರಸ್ತುತ ಸ್ಥಿತಿಗತಿ, ಬಾಕಿ ಇರುವ ಅನುಮತಿಗಳು, ತಾಂತ್ರಿಕ ಅಂಶಗಳು ಹಾಗೂ ಎದುರಾಗಿರುವ ಸವಾಲುಗಳ ಕುರಿತು ಮಾಹಿತಿ ಪಡೆದರು. ಬೆಂಗಳೂರು ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಭವಿಷ್ಯದ ಕುಡಿಯುವ ನೀರಿನ ಅಗತ್ಯತೆ ಪೂರೈಸುವ ದೃಷ್ಟಿಯಿಂದ ಮೇಕೆದಾಟು ಯೋಜನೆ ಮಹತ್ವದ್ದಾಗಿದೆ. ಯೋಜನೆಗೆ ಸಂಬಂಧಿಸಿದ ಯಾವುದೇ ಪ್ರಕ್ರಿಯೆಯಲ್ಲಿ ವಿಳಂಬವಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಯೋಜನೆಯ ವಿಸ್ತೃತ ಯೋಜನಾ ವರದಿ, ಕೇಂದ್ರ ಸರ್ಕಾರದ ಅನುಮತಿಗಳು, ಪರಿಸರ ಮತ್ತು ಅರಣ್ಯ ಸಂಬಂಧಿತ ವಿಷಯಗಳು, ಭೂಸ್ವಾಧೀನ, ಪುನರ್ವಸತಿ ಹಾಗೂ ತಾಂತ್ರಿಕ ವಿಚಾರಗಳ ಕುರಿತು ಅಧಿಕಾರಿಗಳಿಂದ ವಿವರ ಪಡೆದುಕೊಂಡ ಸಚಿವರು, ಬಾಕಿ ಇರುವ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಕರ್ನಾಟಕದ ಹಿತಾಸಕ್ತಿಗೆ ರಾಜಿ ಇಲ್ಲ: ಮೇಕೆದಾಟು ಯೋಜನೆ ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ನಗರಗಳ ಕುಡಿಯುವ ನೀರಿನ ಭವಿಷ್ಯಕ್ಕೆ ಸಂಬಂಧಿಸಿದ ಮಹತ್ವದ ಯೋಜನೆಯಾಗಿದೆ. ಕರ್ನಾಟಕದ ಜನರ ಕುಡಿಯುವ ನೀರಿನ ಹಕ್ಕು ಮತ್ತು ರಾಜ್ಯದ ಹಿತಾಸಕ್ತಿಯನ್ನು ಯಾವುದೇ ಕಾರಣಕ್ಕೂ ಕಡೆಗಣಿಸಲು ಸಾಧ್ಯವಿಲ್ಲ. ಕಾನೂನು ಮತ್ತು ತಾಂತ್ರಿಕ ನಿಯಮಗಳನ್ನು ಪಾಲಿಸಿಕೊಂಡು ಅಗತ್ಯ ಅನುಮತಿಗಳ ಪ್ರಕ್ರಿಯೆಗೆ ವೇಗ ನೀಡಬೇಕು ಎಂದು ಚಲುವರಾಯಸ್ವಾಮಿ ಹೇಳಿದರು.

ಯೋಜನೆಗೆ ಸಂಬಂಧಿಸಿದಂತೆ ಇದುವರೆಗೆ ಕೈಗೊಂಡಿರುವ ಕ್ರಮಗಳು, ಬಾಕಿ ಇರುವ ಅನುಮತಿಗಳು ಹಾಗೂ ಮುಂದಿನ ಹಂತದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸಂಬಂಧಿಸಿದ ಎಲ್ಲ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಕೇಂದ್ರದ ಇಲಾಖೆಗಳು ಹಾಗೂ ಪ್ರಾಧಿಕಾರಗಳೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು ಎಂದರು.

ಮುಂದಿನ ಹಲವು ದಶಕಗಳ ಕುಡಿಯುವ ನೀರಿನ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಯೋಜನೆಯನ್ನು ಮುನ್ನಡೆಸಬೇಕು. ಈ ಸಂಬಂಧ ಸ್ಪಷ್ಟ ಕಾಲಮಿತಿಯ ಕಾರ್ಯಯೋಜನೆ ರೂಪಿಸಿ ಶೀಘ್ರ ವರದಿ ಸಲ್ಲಿಸುವಂತೆ ಸಚಿವರು ನಿರ್ದೇಶನ ನೀಡಿದರು. ಸಭೆಯಲ್ಲಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಸೇರಿದಂತೆ ಜಲಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಸೇರಿದಂತೆ ಸಚಿವ ಸಂಪುಟ ಸಚಿವರ ಸಮ್ಮುಖದಲ್ಲಿ ವಿಧಾನ ಸಭೆಯ ಸಭಾಧ್ಯಕ್ಷರ ಸ್ಥಾನಕ್ಕೆ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಜಿ.ಎಸ್.ಪಾಟೀಲ್ ಅವರು ವಿಧಾನ ಸಭೆಯ ಕಾರ್ಯದರ್ಶಿ ಮತ್ತು ವಿಧಾನ ಪರಿಷತ್ತಿನ ಸಭಾಪತಿ ಸ್ಥಾನಕ್ಕೆ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸಲೀಂ ಅಹ್ಮದ್ ಅವರು ವಿಧಾನ ಪರಿಷತ್ ಕಾರ್ಯದರ್ಶಿ ಜ್ಯೋತಿ ಅವರಿಗೆ ಹಾಗೂ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರಗಳನ್ನು ಸಲ್ಲಿಸಿದರು.

# 15 ಸಾವಿರ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ವಿವಿಧ ವೃಂದದ 15 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಶಾಲಾ ಶಿಕ್ಷಣ ಇಲಾಖೆ ನೇಮಕಾತಿ ಪ್ರಕ್ರಿಯೆ ಆರಂಭಿಸಿದೆ. ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಾಥಮಿಕ ಶಾಲಾ ಶಿಕ್ಷಕರು (1ರಿಂದ 5ನೇ ತರಗತಿ), ಪ್ರೌಢಶಾಲಾ ಸಹಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು (ಗ್ರೇಡ್-1 ಮತ್ತು ಗ್ರೇಡ್-2) ಹಾಗೂ ಕಂಪ್ಯೂಟರ್ ಸೈನ್ಸ್ ಶಿಕ್ಷಕರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುತ್ತದೆ.


ಆ.18ರಿಂದ ಅರ್ಜಿ: ಆನ್‌ಲೈನ್ ಅರ್ಜಿ ಸಲ್ಲಿಕೆ ಆ.18ರಂದು ಆರಂಭವಾಗಲಿದ್ದು, ಸೆ.7 ಅರ್ಜಿ ಸಲ್ಲಿಕೆಗೆ ಕೊನೆಯ ದಿನವಾಗಿದೆ. ರಾಜ್ಯಾದ್ಯಂತ ಜಿಲ್ಲಾ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ.

ಅ.5ರಂದು ಪರೀಕ್ಷೆ: ಪತ್ರಿಕೆ-1ರ ಪರೀಕ್ಷೆ ಅ.5ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 12ರವರೆಗೆ ನಡೆಯಲಿದೆ. ಪತ್ರಿಕೆ-2ರ (ಗಣಿತ, ಪರಿಸರ ಅಧ್ಯಯನ, ಸಮಾಜ ವಿಜ್ಞಾನ) ಪರೀಕ್ಷೆ ಮಧ್ಯಾಹ್ನ 2.30ರಿಂದ ಸಂಜೆ 4.30ರವರೆಗೆ ನಡೆಯಲಿದೆ. ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಹುದ್ದೆಯ ಪತ್ರಿಕೆ-2ರ ಪರೀಕ್ಷೆ ಅ.6ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 12ರವರೆಗೆ ನಡೆಯಲಿದೆ. ನೇಮಕಾತಿಗೆ ಸಂಬಂಧಿಸಿದ ಅಧಿಸೂಚನೆ ಹಾಗೂ ವೇಳಾಪಟ್ಟಿಯನ್ನು ಶಾಲಾ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಅಂಚೆ ಅಥವಾ ಇತರ ಯಾವುದೇ ಮಾದರಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಅರ್ಜಿ ಸಲ್ಲಿಸುವಾಗ ಆಧಾರ್ ಸಂಖ್ಯೆ ನಮೂದಿಸುವುದು ಕಡ್ಡಾಯ ಎಂದು ಇಲಾಖೆ ತಿಳಿಸಿದೆ.

# ಹೊರ ವರ್ತುಲ ರಸ್ತೆ ಅಭಿವೃದ್ಧಿಗೆ ಕೃಷ್ಣ ಬೈರೇಗೌಡ ಸಭೆ

● ವಿಕ್ರಮ ವಾಹಿನಿ । ಬೆಂಗಳೂರು



ನಗರದ ಹೊರ ವರ್ತುಲ ರಸ್ತೆಯ (ಒಆರ್‌ಆರ್) ಸಂಚಾರ ವ್ಯವಸ್ಥೆ ಸುಧಾರಣೆ ಹಾಗೂ ಪಾದಚಾರಿಗಳ ಸುರಕ್ಷತೆಗಾಗಿ ಹಲವು ಕ್ರಮಗಳನ್ನು ಕೈಗೊಳ್ಳಲು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಪಾದಚಾರಿ ಮಾರ್ಗವನ್ನು ಕನಿಷ್ಠ ಮೂರು ಮೀಟರ್ ಅಗಲದಲ್ಲಿ ಎಂಡ್-ಟು-ಎಂಡ್ ನಿರ್ಮಿಸುವಂತೆ ಸೂಚಿಸಲಾಗಿದೆ. ಸ್ಲಿಪ್ ರಸ್ತೆಗಳಲ್ಲಿ ಕನಿಷ್ಠ 1.8 ಮೀಟರ್ ಅಗಲದ ಪಾದಚಾರಿ ಮಾರ್ಗ ಕಲ್ಪಿಸಬೇಕು. ರಸ್ತೆ ಬದಿಯಲ್ಲಿರುವ ಸಂಪೂರ್ಣ ಒತ್ತುವರಿಗಳನ್ನು ತೆರವುಗೊಳಿಸುವಂತೆಯೂ ನಿರ್ದೇಶನ ನೀಡಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಖಾಸಗಿಯವರು ಅಳವಡಿಸಿರುವ ವಿದ್ಯುತ್ ಪರಿವರ್ತಕಗಳನ್ನು ಗುರುತಿಸಿ ತೆರವುಗೊಳಿಸುವಂತೆ ಸಚಿವರು ಸೂಚಿಸಿದರು. ಸರ್ವೀಸ್ ರಸ್ತೆಗಳಲ್ಲಿ ಲಭ್ಯವಿರುವ ಬಫರ್ ಜಾಗದಲ್ಲಿ ಟ್ಯಾಕ್ಸಿ ಹಾಗೂ ಬಸ್‌ಗಳ ಇಳಿಸುವಿಕೆ-ಹತ್ತಿಸುವಿಕೆ ಸ್ಥಳಗಳನ್ನು ನಿರ್ಮಿಸಿ, ಅವುಗಳಿಗೆ ಪ್ರತ್ಯೇಕ ಬಣ್ಣದ ಗುರುತು ನೀಡುವಂತೆ ತಿಳಿಸಿದರು. ಮುಖ್ಯ ರಸ್ತೆಯಲ್ಲಿ ಬಸ್‌ಗಳಿಗೆ ಪ್ರತ್ಯೇಕ ನಿಲುಗಡೆ ಸ್ಥಳ ನಿರ್ಮಿಸುವ ಬಗ್ಗೆಯೂ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಒಆರ್‌ಆರ್‌ನಲ್ಲಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಅಕ್ಟೋಬರ್‌ನಲ್ಲಿ ಆರಂಭಿಸಿ ಜನವರಿಯೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಸಂಚಾರ ದಟ್ಟಣೆ ತಗ್ಗಿಸಲು ಆಂತರಿಕ ರಸ್ತೆಗಳನ್ನು ಪರ್ಯಾಯ ಮಾರ್ಗವಾಗಿ ಬಳಸಿಕೊಳ್ಳುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು. ಒಆರ್‌ಆರ್‌ಸಿಎ ಹಾಗೂ ಪೊಲೀಸ್ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವರು ತಿಳಿಸಿದರು. ಎಲ್ಲಾ ಪ್ರಕ್ರಿಯೆಗಳನ್ನು ತ್ವರಿತವಾಗಿ ಅಂತಿಮಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್. ಕೆ. ಅತೀಕ್, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತ ನಿತೀಶ್, ಡಿಸಿಪಿ ಶಾಹಿಲ್ ಬಾಗ್ಲಾ, ಬಿ-ಸ್ಮೈಲ್ ತಾಂತ್ರಿಕ ನಿರ್ದೇಶಕ ಪ್ರಹ್ಲಾದ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ವಿಧಾನಸಭೆ ಅಧಿವೇಶನ ಆರಂಭಕ್ಕೆ ಮೊದಲು ಸಿಎಂ ಡಿ ಕೆ ಶಿವಕುಮಾರ್ ಹಾಗೂ ಡಿಸಿಎಂ ಡಾ ಜಿ ಪರಮೇಶ್ವರ ಅವರು ಹಂಗಾಮಿ ಸಭಾಧ್ಯಕ್ಷ ಟಿ ಬಿ ಜಯಚಂದ್ರ ಅವರನ್ನು ವಿಧಾನಸೌಧದ ಸ್ಪೀಕರ್ ಕೊಠಡಿಯಲ್ಲಿ ಗುರುವಾರ ಅಭಿನಂದಿಸಿದರು.

# ಅಕ್ರಮ ಗಣಿಗಾರಿಕೆಗೆ ಬ್ರೇಕ್: ಮಲ್ಲಿಕಾರ್ಜುನ್ ಖಡಕ್ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು




ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅನಧಿಕೃತ ಮರಳು ಸಾಗಣೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಅಕ್ರಮ ದಂಧೆಗಳಿಗೆ ತಕ್ಷಣವೇ ಬ್ರೇಕ್ ಹಾಕಬೇಕು ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಇಲಾಖೆಯ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು. ಅಧಿಕಾರ ಸ್ವೀಕರಿಸಿದ ಬಳಿಕ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ನಡೆಸಿದ ಮೊದಲ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವರು ಇಲಾಖೆಯ ಮುಂದಿನ ಕಾರ್ಯವೈಖರಿ ಕುರಿತು ಮಹತ್ವದ ಮಾರ್ಗಸೂಚಿಗಳನ್ನು ಪ್ರಸ್ತಾಪಿಸಿದರು.

ರಾಜಧನ ಸಂಗ್ರಹಣೆ ಗುರಿ ತಲುಪಲು ಗಡುವು: ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ಆದಾಯದಲ್ಲಿ ಯಾವುದೇ ಸೋರಿಕೆಯಾಗಬಾರದು. ಇಲಾಖೆಗೆ ನಿಗದಿಪಡಿಸಲಾಗಿರುವ ರಾಜಧನ ಸಂಗ್ರಹಣೆಯ ಗುರಿಯನ್ನು ಕಡ್ಡಾಯವಾಗಿ ತಲುಪಬೇಕು. ಬಾಕಿ ಇರುವ ಗಣಿ ಗುತ್ತಿಗೆಗಳ ನವೀಕರಣ ಪ್ರಕ್ರಿಯೆ ಹಾಗೂ ಹರಾಜು ಪ್ರಕ್ರಿಯೆಯನ್ನು ವಿಳಂಬ ಮಾಡದೆ ವೇಗಗೊಳಿಸಬೇಕು ಎಂದು ಅಧಿಕಾರಿಗಳಿಗೆ ಗಡುವು ನೀಡಿದರು. ಇಲಾಖೆಯ ಆಡಳಿತದಲ್ಲಿ ಸಂಪೂರ್ಣ ಪಾರದರ್ಶಕತೆ ತರಲು ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸಬೇಕು. ಸಾರ್ವಜನಿಕರು ಮತ್ತು ಉದ್ಯಮಿಗಳು ಮರಳು ಹಾಗೂ ಇತರೆ ಖನಿಜಗಳ ಸಾಗಣೆಗೆ ಪಡೆಯುವ ಆನ್‌ಲೈನ್ ರಹದಾರಿ ವ್ಯವಸ್ಥೆಯನ್ನು ಇನ್ನಷ್ಟು ಸುಲಭಗೊಳಿಸಬೇಕು. ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಿ ಭ್ರಷ್ಟಾಚಾರಕ್ಕೆ ಆಸ್ಪದವಿಲ್ಲದಂತೆ ಆಡಳಿತ ನಡೆಸಬೇಕು ಎಂದು ತಿಳಿಸಿದರು.

ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಹಣವನ್ನು ಗಣಿಗಾರಿಕೆಯಿಂದ ತೊಂದರೆಗೊಳಗಾದ ಪ್ರದೇಶಗಳ ಸುಧಾರಣೆಗೆ ಮಾತ್ರ ಬಳಸಬೇಕು. ಗಣಿ ಸಂತ್ರಸ್ತ ಗ್ರಾಮಗಳಲ್ಲಿ ರಸ್ತೆ, ಕುಡಿಯುವ ನೀರು, ಉತ್ತಮ ಆರೋಗ್ಯ ಸೌಲಭ್ಯ ಹಾಗೂ ಶಾಲೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಈ ನಿಧಿಯನ್ನು ಸಮರ್ಪಕವಾಗಿ ವಿನಿಯೋಗಿಸಲು ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಆದೇಶಿಸಿದರು.

ಸಾಮಾನ್ಯ ಜನರು ಸ್ವಂತ ಮನೆ ಕಟ್ಟಿಕೊಳ್ಳಲು ಮರಳಿನ ಕೊರತೆಯಾಗದಂತೆ ನೋಡಿಕೊಳ್ಳುವುದು ಸರ್ಕಾರದ ಆದ್ಯತೆಯಾಗಿದೆ. ಜನರಿಗೆ ಸುಲಭವಾಗಿ ಮತ್ತು ನ್ಯಾಯೋಚಿತ ಬೆಲೆಯಲ್ಲಿ ಮರಳು ಸಿಗುವಂತೆ ಮಾಡಲು ಪ್ರಸ್ತುತ ಇರುವ ಮರಳು ನೀತಿಯನ್ನು ತಳಮಟ್ಟದಲ್ಲಿ ಸಮರ್ಪಕವಾಗಿ ಅನುಷ್ಠಾನಕ್ಕೆ ತರಬೇಕು ಎಂದು ಸಚಿವರು ಸಭೆಯಲ್ಲಿ ಸ್ಪಷ್ಟಪಡಿಸಿದರು.ಇಲಾಖೆಯು ಕೇವಲ ಆದಾಯ ಗಳಿಕೆಯ ಮೂಲವಾಗದೆ, ಪರಿಸರ ಸಂರಕ್ಷಣೆ ಮತ್ತು ಸಾರ್ವಜನಿಕ ಸ್ನೇಹಿ ಆಡಳಿತಕ್ಕೆ ಮಾದರಿಯಾಗಬೇಕು ಎಂದು ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

# ಸ್ವಾನಂದಾಶ್ರಮ: ಭಕ್ತಿ, ಸಂಸ್ಕೃತಿ, ಸೇವೆ ಮತ್ತು ಹೊಯ್ಸಳ ವೈಭವದ ಸಂಗಮ

● ವಿಕ್ರಮ ವಾಹಿನಿ । ಬೆಂಗಳೂರು

ಕನಕಪುರ ರಸ್ತೆಯ ಅಗರ–ತಾತಗುಣಿಯಲ್ಲಿ ನೆಲೆಗೊಂಡಿರುವ *ಶ್ರೀ ಸ್ವಾನಂದಾಶ್ರಮ (ಶ್ರೀ ಗಣೇಶ ಮಹಾ ಸಂಸ್ಥಾನ)*ವು ಗಣೇಶೋಪಾಸನೆ, ಭಾರತೀಯ ಸಂಸ್ಕೃತಿ, ಜ್ಞಾನಯಜ್ಞ, ಸಾಮಾಜಿಕ ಸೇವೆ ಹಾಗೂ ಹೊಯ್ಸಳ ಶಿಲ್ಪಕಲೆಯ ಪುನರುಜ್ಜೀವನವನ್ನು ಸಮನ್ವಯಗೊಳಿಸಿರುವ ವಿಶಿಷ್ಟ ಆಧ್ಯಾತ್ಮಿಕ ಕೇಂದ್ರವಾಗಿ ಬೆಳೆದುಬಂದಿದೆ. ರಜತ ಮಹೋತ್ಸವವನ್ನು ಪೂರೈಸಿರುವ ಈ ಕ್ಷೇತ್ರದಲ್ಲಿ ನಿತ್ಯ ಧಾರ್ಮಿಕ ಆಚರಣೆಗಳ ಜತೆಗೆ ವಿವಿಧ ಜನಪರ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಿವೆ. ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಪರಮಪೂಜ್ಯ ಶ್ರೀ ಗಂಗಾಧರೇಂದ್ರ ಸರಸ್ವತೀ ಮಹಾಸ್ವಾಮೀಜಿಯವರ ದಿವ್ಯ ಮಾರ್ಗದರ್ಶನದಲ್ಲಿ ಆಶ್ರಮವು ಗಣೇಶತತ್ವದ ಅಧ್ಯಯನ, ಸಂಶೋಧನೆ, ಗ್ರಂಥಪ್ರಕಾಶನ ಹಾಗೂ ಉಪಾಸನಾ ಸಾಹಿತ್ಯದ ಪ್ರಸಾರದ ಮೂಲಕ ಜ್ಞಾನಯಜ್ಞವನ್ನು ನಡೆಸುತ್ತಿದೆ. ಆಗಸ್ಟ್ 16ರಿಂದ ಒಂದು ತಿಂಗಳ ಕಾಲ,



ಶ್ರಾವಣ ಶುದ್ಧ ಚತುರ್ಥಿಯಿಂದ ಭಾದ್ರಪದ ಶುದ್ಧ ಚತುರ್ಥಿಯವರೆಗೆ ನಡೆಯುವ ಈ ವ್ರತದಲ್ಲಿ ಗಣಪತಿ ಪೂಜೆ, ಏಕಾಕ್ಷರ ಮಂತ್ರಜಪ, ನಿತ್ಯ ಅನ್ನದಾನ ಹಾಗೂ ಸಮಾರೋಪದಲ್ಲಿ ಹೋಮ–ಪೂರ್ಣಾಹುತಿ ನೆರವೇರಲಿದೆ. ಗಣೇಶ ಪುರಾಣದಲ್ಲಿ ಪಾರ್ವತಿಯು ಶಿವನ ದರ್ಶನ ಹಾಗೂ ಪತಿಯ ಪ್ರಾಪ್ತಿಗಾಗಿ ಈ ವ್ರತವನ್ನು ಆಚರಿಸಿದ ಪ್ರಸಂಗ ಉಲ್ಲೇಖಿತವಾಗಿದೆ. ಶ್ರದ್ಧೆ, ಭಕ್ತಿ ಮತ್ತು ನಿಯಮಬದ್ಧತೆಯಿಂದ ವ್ರತಾಚರಣೆ ಮಾಡಿದರೆ ಗಣಪತಿಯ ಅನುಗ್ರಹದಿಂದ ಸಂಕಲ್ಪಿತ ಇಷ್ಟಾರ್ಥಗಳು ಈಡೇರುತ್ತವೆ ಎಂಬ ನಂಬಿಕೆ ಭಕ್ತರಲ್ಲಿದೆ.

ಎಂಟು ಶತಮಾನಗಳ ಹಿಂದೆ ಕರ್ನಾಟಕಕ್ಕೆ ಜಾಗತಿಕ ಕೀರ್ತಿ ತಂದ ಹೊಯ್ಸಳ ಶಿಲ್ಪಕಲೆಯ ವೈಭವವನ್ನು ಪುನರುಜ್ಜೀವನಗೊಳಿಸುವ ಮಹಾಸಂಕಲ್ಪವನ್ನು ಆಶ್ರಮ ಕೈಗೊಂಡಿದೆ. ನಕ್ಷತ್ರಾಕಾರದ ಜಗತಿ, ಬಳಪದ ಕಲ್ಲಿನ ಸೂಕ್ಷ್ಮ ಕೆತ್ತನೆ, ಅಲಂಕೃತ ತೋರಣಗಳು, ಪುರಾಣ–ಇತಿಹಾಸದ ಶಿಲ್ಪಚಿತ್ರಗಳು ಹಾಗೂ ವೈಜ್ಞಾನಿಕ ಜಲಸಂರಕ್ಷಣಾ ವ್ಯವಸ್ಥೆ ದೇವಾಲಯದ ವಿಶೇಷತೆಗಳಾಗಿವೆ.

ಶ್ರೀಚಕ್ರ ಸಹಿತ ಸರ್ಪಾರೂಢ ಮಹಾರಾಜ್ಞಿ ದೇವಾಲಯ, ಗಣೇಶ ಪುರಾಣೋಕ್ತ 32 ಗಣಪತಿ ಸ್ವರೂಪಗಳು ಹಾಗೂ ಮುದ್ಗಲ ಪುರಾಣೋಕ್ತ ಚತುರ್ಯುಗ ಗಣಪತಿಗಳ ಸಮುಚ್ಚಯ ಈ ಕ್ಷೇತ್ರದ ಪ್ರಮುಖ ಆಕರ್ಷಣೆಗಳಾಗಿವೆ.

ಧಾರ್ಮಿಕ ಚಟುವಟಿಕೆಗಳ ಜತೆಗೆ ಸ್ವಾನಂದಾಶ್ರಮವು ವಿದ್ಯಾಚೇತನ ಯೋಜನೆ, ಅನ್ನದಾನ, ಉಚಿತ ಆರೋಗ್ಯ ತಪಾಸಣಾ ಶಿಬಿರ, ಗೋಸಂರಕ್ಷಣೆ, ಸಂಸ್ಕೃತ ಗುರುಕುಲ



ಹಾಗೂ ಧನ್ವಂತರಿ ವನದಂತಹ ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತಿದೆ.

"ಅನ್ನದಾನ ಒಂದು ದಿನದ ಪುಣ್ಯಕ್ಕೆ ಕಾರಣವಾದರೆ, ವಿದ್ಯಾದಾನ ಒಂದು ಜನಾಂಗದ ಭವಿಷ್ಯ ರೂಪಿಸುತ್ತದೆ; ಸಂಸ್ಕೃತಿ ಸಂರಕ್ಷಣೆಗೆ ನೀಡುವ ಕೊಡುಗೆ ಹಲವು ತಲೆಮಾರುಗಳಿಗೆ ಶಾಶ್ವತ ಫಲ ನೀಡುತ್ತದೆ" ಎಂಬ ಆಶಯದೊಂದಿಗೆ ಈ ಮಹತ್ಕಾರ್ಯಕ್ಕೆ ಭಕ್ತರು, ದಾನಿಗಳು ಹಾಗೂ ಕಲಾಭಿಮಾನಿಗಳು ಕೈಜೋಡಿಸುವಂತೆ ಆಶ್ರಮದ ವತಿಯಿಂದ ಮನವಿ ಮಾಡಲಾಗಿದೆ. ಸ್ವಾನಂದಾಶ್ರಮಕ್ಕೆ ಭೇಟಿ ನೀಡುವ ಭಕ್ತರು ಸಮೀಪದಲ್ಲಿರುವ ಹಲವು ಧಾರ್ಮಿಕ ಹಾಗೂ ಸಾಂಸ್ಕೃತಿಕ ತಾಣಗಳನ್ನೂ ಸಂದರ್ಶಿಸಬಹುದು. ವಸಂತಪುರದ ಪ್ರಸಿದ್ಧ ವಲ್ಲಭರಾಯಸ್ವಾಮಿ ದೇಗುಲ, ಹೊಸಪಾಳ್ಯದ ಯಂತ್ರೋದ್ಧಾರಕ ಆಂಜನೇಯ ಹಾಗೂ 108 ಸಾಲಿಗ್ರಾಮಗಳಿರುವ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಮೃತ್ತಿಕಾ ಬೃಂದಾವನ ಸನ್ನಿಧಾನದ ತುಳಸಿ ಮಠ, ಶ್ರೀ ಭೂವರಾಹ ಕ್ಷೇತ್ರ, ಶ್ರೀ ಶ್ರೀ ರವಿಶಂಕರ್ ಗುರೂಜಿಯವರ ಆರ್ಟ್ ಆಫ್ ಲಿವಿಂಗ್, ಪಿರಮಿಡ್ ವ್ಯಾಲಿ, ಮರಳವಾಡಿಯ ಅನ್ನಪೂರ್ಣ ದೇವಾಲಯ ಹಾಗೂ ಕಲ್ಲಹಳ್ಳಿಯ ಪುರಾತನ ಶ್ರೀನಿವಾಸ ದೇವಸ್ಥಾನ ಪ್ರಮುಖ ಆಕರ್ಷಣೆಗಳಾಗಿವೆ.

# ಓಣಂ ಹಬ್ಬದ ಪ್ರಯುಕ್ತ

## ಬೆಂಗಳೂರು ಕಂಟೋನ್ಮೆಂಟ್–ಕಣ್ಣೂರು ನಡುವೆ ವಿಶೇಷ ರೈಲು

● ವಿಕ್ರಮ ವಾಹಿನಿ । ಬೆಂಗಳೂರು

ಮುಂಬರುವ ಓಣಂ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು ರೈಲ್ವೆ ಮಂಡಳಿಯು ರೈಲು ಸಂಖ್ಯೆ 06567/06568 ಬೆಂಗಳೂರು ಕಂಟೋನ್ಮೆಂಟ್–ಕಣ್ಣೂರು–ಬೆಂಗಳೂರು ಕಂಟೋನ್ಮೆಂಟ್ ವಿಶೇಷ ಎಕ್ಸ್‌ಪ್ರೆಸ್ ರೈಲಿನ ಕಾರ್ಯಾಚರಣೆಗೆ ಅನುಮೋದನೆ ನೀಡಿದೆ.

ರೈಲು ಸಂಖ್ಯೆ 06567 ಬೆಂಗಳೂರು ಕಂಟೋನ್ಮೆಂಟ್ – ಕಣ್ಣೂರು ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 20, 2026 ರಂದು 22:30 ಗಂಟೆಗೆ ಬೆಂಗಳೂರು ಕಂಟೋನ್ಮೆಂಟ್‌ನಿಂದ ಹೊರಟು, ಮರುದಿನ (ಆಗಸ್ಟ್ 21) 12:50 ಗಂಟೆಗೆ ಕಣ್ಣೂರು ತಲುಪಲಿದೆ. ಮರುಪ್ರಯಾಣದಲ್ಲಿ, ರೈಲು ಸಂಖ್ಯೆ 06568 ಕಣ್ಣೂರು – ಬೆಂಗಳೂರು ಕಂಟೋನ್ಮೆಂಟ್ ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 21, 2026 ರಂದು 16:10 ಗಂಟೆಗೆ ಕಣ್ಣೂರಿನಿಂದ ಹೊರಟು, ಆಗಸ್ಟ್ 22 ರಂದು 06:00 ಗಂಟೆಗೆ ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣಕ್ಕೆ ಆಗಮಿಸಲಿದೆ.

ಈ ವಿಶೇಷ ರೈಲು ಮಾರ್ಗಮಧ್ಯೆ ಕೃಷ್ಣರಾಜಪುರಂ, ಬಂಗಾರಪೇಟೆ, ಕುಪ್ಪಂ, ಸೇಲಂ, ಈರೋಡ್, ತಿರುಪ್ಪೂರ್, ಪೊದನೂರ್, ಪಾಲಕ್ಕಾಡ್, ಶೋರನೂರ್, ತಿರೂರ್, ಪರಪನಂಗಡಿ, ಕೋಝಿಕ್ಕೋಡ್, ವಡಕರ ಮತ್ತು ತಲಶ್ಶೇರಿ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.

ಈ ವಿಶೇಷ ರೈಲು ಒಟ್ಟು 23 ಬೋಗಿಗಳನ್ನು ಹೊಂದಿರಲಿದ್ದು, ಇದರಲ್ಲಿ 16 ಸ್ಲೀಪರ್ ಕ್ಲಾಸ್, 5 ಜನರಲ್ ಸೆಕೆಂಡ್ ಕ್ಲಾಸ್ ಮತ್ತು 2 ಸೆಕೆಂಡ್ ಕ್ಲಾಸ್ ಲಗೇಜ್–ಕಮ್–ಬ್ರೇಕ್ ವ್ಯಾನ್ ಬೋಗಿಗಳು ಇರಲಿವೆ.

# ರೂ10.74 ಕೋಟಿ ವಂಚನೆ: 'ರೀಲ್ಸ್ ಸ್ಟಾರ್' ಬಂಧನ

● ವಿಕ್ರಮ ವಾಹಿನಿ । ನವದೆಹಲಿ

'ಡಿಜಿಟಲ್ ಅರೆಸ್ಟ್' ಹೆಸರಿನಲ್ಲಿ ವೃದ್ಧರೊಬ್ಬರಿಂದ 10.74 ಕೋಟಿ ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣದ ಇನ್ಫ್ಲುಯೆನ್ಸರ್ ರೋಹನ್ ಜಾಧವ್‌ನನ್ನು ಪುಣೆ ಪೊಲೀಸರು ಬಂಧಿಸಿದ್ದಾರೆ. ಹಾಂಗ್‌ಕಾಂಗ್‌ನಲ್ಲಿರುವ ವ್ಯಕ್ತಿಗಳೊಂದಿಗೆ ಸಂಪರ್ಕ ಹೊಂದಿದ್ದ ಆರೋಪವೂ ಆತನ ಮೇಲಿದ್ದು, ತನಿಖೆ ಚುರುಕುಗೊಂಡಿದೆ.

ಈ ವರ್ಷದ ಜನವರಿಯಲ್ಲಿ ವಂಚಕರ ತಂಡವೊಂದು ಸಿಬಿಐ ಅಧಿಕಾರಿಗಳಂತೆ ನಟಿಸಿ ವೃದ್ಧರನ್ನು ಸಂಪರ್ಕಿಸಿತ್ತು. ಅವರ ವಿರುದ್ಧ ಪ್ರಕರಣವಿದೆ ಎಂದು ಬೆದರಿಸಿ, ಕಾನೂನು ಕ್ರಮದಿಂದ ತಪ್ಪಿಸಿಕೊಳ್ಳಲು ವಿವಿಧ ಬ್ಯಾಂಕ್ ಖಾತೆಗಳಿಗೆ 10.74 ಕೋಟಿ ವರ್ಗಾಯಿಸುವಂತೆ ಸೂಚಿಸಿತ್ತು. ವಂಚನೆಗೊಳಗಾಗಿರುವುದು ಅರಿವಾದ ಬಳಿಕ ಸಂತ್ರಸ್ತರು ಪೊಲೀಸರಿಗೆ ದೂರು ನೀಡಿದ್ದರು.

ವಂಚನೆಗೊಳಗಾದ ಹಣದಲ್ಲಿ ಕೆಲ ಮೊತ್ತವನ್ನು ಎಟಿಎಂ ಮೂಲಕ ಹಿಂಪಡೆದ ವ್ಯಕ್ತಿಯ ಸುಳಿವಿನ ಆಧಾರದ ಮೇಲೆ ಪೊಲೀಸರು ಹರ್ಷದ್ ಸುಭಾಷ್ ಧಂತೋಲೆ, ಸಮರ್ಥ್ ಸುರೇಶ್ ದೇಶಮುಖ್ ಮತ್ತು ಅಮರ್ ಶಿವಾಜಿ ಅತ್ತಾರ್ಗಿ ಅವರನ್ನು ಬಂಧಿಸಿದ್ದರು. ವಿಚಾರಣೆ ವೇಳೆ ಧಂತೋಲೆ ನೀಡಿದ ಮಾಹಿತಿ ಆಧರಿಸಿ ರೋಹನ್ ಜಾಧವ್‌ನ ಹೆಸರು ಬೆಳಕಿಗೆ ಬಂದಿದೆ. ಪೊಲೀಸರ ಪ್ರಕಾರ, ಜಾಧವ್ ವಂಚನೆಯಿಂದ ಬಂದ 10.74 ಕೋಟಿಯನ್ನು 5,436 ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿದ್ದಾನೆ. ಟೆಲಿಗ್ರಾಮ್ ಮೂಲಕ ಹಾಂಗ್‌ಕಾಂಗ್‌ನಲ್ಲಿರುವ ವ್ಯಕ್ತಿಗಳೊಂದಿಗೆ ಸಂಪರ್ಕದಲ್ಲಿದ್ದ ಆತ, ವಿಡಿಯೋ ಕರೆಗಳ ಮೂಲಕವೂ ವ್ಯವಹರಿಸುತ್ತಿದ್ದ ಎನ್ನಲಾಗಿದೆ.

ಕ್ರಿಪ್ಟೋಕರೆನ್ಸಿ ಮೂಲಕ ಹಾಂಗ್‌ಕಾಂಗ್‌ನಲ್ಲಿರುವ ತನ್ನ ಸಂಪರ್ಕಗಳಿಗೆ ಹಣ ವರ್ಗಾಯಿಸುತ್ತಿದ್ದ ಜಾಧವ್, ವಿದೇಶಿ ಕರೆನ್ಸಿ ವರ್ಗಾವಣೆಗೆ ಕಮಿಷನ್ ಪಡೆಯುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದ ಇನ್ಫ್ಲುಯೆನ್ಸರ್ ಆಗಿದ್ದ ಆತ ಸೆಲೆಬ್ರಿಟಿ ಮ್ಯಾನೇಜ್‌ಮೆಂಟ್ ಕೆಲಸವನ್ನೂ ಮಾಡುತ್ತಿದ್ದ ಎನ್ನಲಾಗಿದೆ. ಪೊಲೀಸರು ಜಾಧವ್‌ನ ಬ್ಯಾಂಕ್ ಖಾತೆಗಳು ಹಾಗೂ ಆರ್ಥಿಕ ಮೂಲಗಳನ್ನು ನಿರ್ಬಂಧಿಸಿದ ಬಳಿಕ ಆತ ನ್ಯಾಯಾಲಯಕ್ಕೆ ಶರಣಾಗಿದ್ದಾನೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪುಣೆ ಮತ್ತು ಪಿಂಪ್ರಿ–ಚಿಂಚ್‌ವಾಡ್‌ನಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದು, ಹಾಂಗ್‌ಕಾಂಗ್ ಸಂಪರ್ಕದ ಬಗ್ಗೆಯೂ ತನಿಖೆ ಮುಂದುವರಿದಿದೆ.

# ಧ್ವಜಾರೋಹಣದಿಂದ ಜಮೀರ್ ದೂರ

● ವಿಕ್ರಮ ವಾಹಿನಿ । ಬೆಂಗಳೂರು

ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಅವರು ಆಗಸ್ಟ್ 15ರಂದು ವಿಜಯನಗರ ಜಿಲ್ಲಾ ಕೇಂದ್ರದಲ್ಲಿ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸುವ ಜವಾಬ್ದಾರಿಯಿಂದ ವಿನಾಯಿತಿ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ. ಬಿಬಿಎಂಪಿ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ, ವಿಧಾನಸಭೆ ಉಪಚುನಾವಣೆ ಹಾಗೂ ಪಕ್ಷ ಸಂಘಟನೆಯ ಚಟುವಟಿಕೆಗಳಿಂದಾಗಿ ಜಿಲ್ಲಾ ಉಸ್ತುವಾರಿ ಜವಾಬ್ದಾರಿ ನಿರ್ವಹಿಸಲು ಸಮಯದ ಅಭಾವವಿರುವುದಾಗಿ ಅವರು ತಿಳಿಸಿದ್ದಾರೆ. ವಿಜಯನಗರದ ಬರ ಪರಿಸ್ಥಿತಿಯ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿರುವುದಾಗಿ ಪತ್ರದಲ್ಲಿ ಹೇಳಿದ್ದಾರೆ.



# ಅಗಲಿದ ಹಿರಿಯ ಶಾಸಕರಿಗೆ ವಿಧಾನಸಭೆ ಕಲಾಪದಲ್ಲಿ ಸಂತಾಪ

● ವಿಕ್ರಮ ವಾಹಿನಿ । ಬೆಂಗಳೂರು

ಜನಸಂಘದ ಕಾಲದಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿ ರಾಜಕೀಯ ಜೀವನ ಆರಂಭಿಸಿದ ಮಾಜಿ ಸಚಿವ ಹಾಗೂ ಹಿರಿಯ ಮುಖಂಡ ರಾಮಚಂದ್ರಗೌಡರು, ತಮ್ಮ ಸೇವೆಯಿಂದಲೇ ಗುರುತಿಸಿಕೊಂಡಿದ್ದರು. ಕಾರ್ಯದಕ್ಷತೆಗಾಗಿ ಅಂದಿನ ರಾಷ್ಟ್ರಪತಿ ವಿ.ವಿ.ಗಿರಿ ಅವರಿಂದ ಪ್ರಶಂಸೆ ಪಡೆದಿದ್ದರು. ಮಕ್ಕಳ ಸ್ನೇಹಿ ಶಾಸಕ, ಅತ್ಯುತ್ತಮ ಸಂಸದೀಯ ಪಟು ಎಂದು ಪುರಸ್ಕಾರ ಪಡೆದಿದ್ದರು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ. ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.



ಇತ್ತೀಚೆಗೆ ನಿಧನರಾದ ಮಾಜಿ ಶಾಸಕರಿಗೆ ವಿಧಾನಸಭೆ ಕಲಾಪದಲ್ಲಿ ಸಂತಾಪ ಸೂಚಿಸಿ ಅವರು ಮಾತನಾಡಿದರು. ಕೋಲಾರ ಕ್ಷೇತ್ರದ ಮಾಜಿ ಶಾಸಕ ಹಾಗೂ ಹಿರಿಯ ವಕೀಲ ಕೆ.ಆರ್.ಶ್ರೀನಿವಾಸ್ ಅವರು ರಾಜಕೀಯದಲ್ಲೂ ತಮ್ಮದೇ ಕೊಡುಗೆ ನೀಡಿದವರು. ಎಸ್.ಎಚ್.ಪುಟ್ಟರಂಗನಾಥ್, ರಾಯಚೂರು ಮಾಜಿ ಶಾಸಕ ಸೈಯದ್ ಯಾಸಿನ್, ಯಲಹಂಕದ ಕ್ಷೇತ್ರ ಪ್ರತಿನಿಧಿಸಿದ್ದ ಶ್ರೀನಿವಾಸ್, ಶಿವಮೊಗ್ಗದ ಮಾಜಿ ಶಾಸಕ ಎಚ್.ಎಂ.ಚಂದ್ರಶೇಖರಪ್ಪ, ಎಚ್. ಹನುಮಂತಪ್ಪ ಹಾಗೂ ಕೃಷ್ಣಪ್ಪ ಅವರು ನಾಡಿಗಾಗಿ ತಮ್ಮದೇ ಕೊಡುಗೆ ನೀಡಿದವರು ಎಂದು ವಿವರಿಸಿದರು.

ಇತ್ತೀಚೆಗೆ ನಿಧನರಾದ ಹಿರಿಯ ಗಾಯಕಿಯರಾದ ಶ್ರೀಮತಿ ಎಸ್.ಜಾನಕಿ ಹಾಗೂ ಶ್ರೀಮತಿ ಆಶಾ ಭೋಂಸ್ಲೆ ಅವರ ಕುರಿತು ಮಾತನಾಡಿದ ವಿಜಯೇಂದ್ರ ಅವರು, ಇವರಿಬ್ಬರೂ ಈಗ ಇಲ್ಲವಾದರೂ ಅವರ ಧ್ವನಿಯಿಂದ ಸೂರ್ಯಚಂದ್ರ ಇರುವರೆಗೆ ಅಮರರಾಗಿರುತ್ತಾರೆ. ಅವರ ಹಾಡುಗಳು ಸದಾ ನೆನಪಿನಲ್ಲಿ ಉಳಿದಿರುತ್ತವೆ ಎಂದು ತಿಳಿಸಿದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರು ಇತ್ತೀಚೆಗೆ ನಿಧನರಾಗಿದ್ದು, ಅವರು ದೇವೇಗೌಡರಿಗೆ ಶಕ್ತಿಯಾಗಿದ್ದರು.

ಚೆನ್ನಮ್ಮ ಅವರು ಅಪಾರ ಜನಬೆಂಬಲ– ಪ್ರೀತಿ ಪಡೆದಿದ್ದರು. ಅವರು ನಿಧನರಾದಾಗ ಸೇರಿದ್ದ ಲಕ್ಷಾಂತರ ಜನರೇ ಅದನ್ನು ಹೇಳುತ್ತಿತ್ತು ಎಂದರು. ಅಗಲಿದ ಎಲ್ಲ ಹಿರಿಯರು ಮತ್ತು ಸಾಧಕರ ಆತ್ಮಕ್ಕೆ ದೇವರು ಚಿರಶಾಂತಿ ನೀಡಲಿ. ಅವರ ಬಂಧುಗಳಿಗೆ ಅಗಲುವಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ನೀಡಲಿ ಎಂದು ಕೋರಿದರು



**ಕರ್ನಾಟಕ ವಿಧಾನ ಪರಿಷತ್ತಿನ ಗೌರವಾನ್ವಿತ ಸಭಾಪತಿ ಸ್ಥಾನಕ್ಕೆ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಯಾಗಿ ಪರಿಷತ್ ಸದಸ್ಯ ಪಿ.ಹೆಚ್. ಪೂಜಾರ್ ಅವರು ಇಂದು ವಿಧಾನ ಪರಿಷತ್ತಿನ ಕಾರ್ಯದರ್ಶಿಗೆ ಅಧಿಕೃತ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ಎನ್‌ಡಿಎ ಒಕ್ಕೂಟದ ಶಾಸಕರೊಂದಿಗೆ ಭಾಗವಹಿಸಿ, ಬೆಂಬಲ ಸೂಚಿಸಿದರು. ಎರಡೂ ಪಕ್ಷಗಳ ವಿಧಾನ ಪರಿಷತ್ ಸದಸ್ಯರು ಉಪಸ್ಥಿತರಿದ್ದರು.**

# ಸಿದ್ಧಾರ್ಥ ವಿಹಾರ ಭೂ ಹಗರಣ: ಪ್ರಿಯಾಂಕ್ ರಾಜೀನಾಮೆಗೆ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಜಮೀನು ಮಂಜೂರು ಮಾಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತನಿಖೆಗೆ ಆದೇಶಿಸಿರುವ ಹಿನ್ನೆಲೆಯಲ್ಲಿ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಕ್ಷಣ ರಾಜೀನಾಮೆ ನೀಡಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆಗ್ರಹಿಸಿದ್ದಾರೆ.



ನ್ಯಾಯಾಲಯದ ಆದೇಶವು ಕಾಂಗ್ರೆಸ್ ಸರ್ಕಾರಕ್ಕೆ ತೀವ್ರ ಮುಜುಗರ ತಂದಿದ್ದು, ಖರ್ಗೆ ಕುಟುಂಬದ ವಿರುದ್ಧದ ಭೂ ಹಗರಣದ ಆರೋಪಗಳಿಗೆ ಬಲ ಸಿಕ್ಕಂತಾಗಿದೆ ಎಂದು ಅವರು ಹೇಳಿದರು. ಸರ್ಕಾರಿ ಜಮೀನನ್ನು ಖಾಸಗಿ ಟ್ರಸ್ಟ್‌ಗೆ ನೀಡಿರುವ ವಿಚಾರದಲ್ಲಿ ಅಧಿಕಾರ ದುರ್ಬಳಕೆ ಹಾಗೂ ಸ್ವಜನಪಕ್ಷಪಾತದ ಆರೋಪಗಳಿವೆ ಎಂದು ರವಿಕುಮಾರ್ ಆರೋಪಿಸಿದರು.

ತನಿಖೆ ನಡೆಯುತ್ತಿರುವ ಸಂದರ್ಭದಲ್ಲಿ ಪ್ರಿಯಾಂಕ್ ಖರ್ಗೆ ಸಚಿವ ಸ್ಥಾನದಲ್ಲಿರುವುದು ನೈತಿಕವಾಗಿ ಸರಿಯಲ್ಲ. ಅವರು ಸಾಕ್ಷ್ಯಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ತಕ್ಷಣ ರಾಜೀನಾಮೆ ನೀಡಬೇಕು ಅಥವಾ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಸಂಪುಟದಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು.

ಜಮೀನನ್ನು ಹಿಂದಿರುಗಿಸಿರುವುದರಿಂದ ಆರೋಪದಿಂದ ಮುಕ್ತರಾಗಲು ಸಾಧ್ಯವಿಲ್ಲ. ನ್ಯಾಯಾಲಯದ ತನಿಖೆ ಪೂರ್ಣಗೊಂಡು ಸತ್ಯಾಂಶ ಹೊರಬರಬೇಕು. ಈ ಪ್ರಕರಣದಲ್ಲಿ ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನು ಕ್ರಮ ಎದುರಿಸಬೇಕು ಎಂದು ಅವರು ಆಗ್ರಹಿಸಿದರು.

ರವಿಕುಮಾರ್, ಈ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರವು ಪಾರದರ್ಶಕ ತನಿಖೆಗೆ ಸಹಕರಿಸಬೇಕು. ಸರ್ಕಾರಿ ಆಸ್ತಿಯನ್ನು ಖಾಸಗಿ ಹಿತಾಸಕ್ತಿಗೆ ಬಳಸಲಾಗಿದೆ ಎಂಬ ಆರೋಪಗಳ ಬಗ್ಗೆ ಸಂಪೂರ್ಣ ತನಿಖೆ ನಡೆಸಿ, ತಪ್ಪಿತಸ್ಥರು ಕಂಡುಬಂದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ನಿಮ್ಹಾನ್ಸ್ ಬಳಿ ಸ್ನೇಹ ಚೈತನ್ಯದಿಂದ ಧ್ವಜಾರೋಹಣ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತಕ್ಕೆ ಸ್ವಾತಂತ್ರ್ಯ ಲಭಿಸಿ 80 ವಸಂತಗಳು ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಇದೇ ಆಗಸ್ಟ್ 14 ರಂದು 80 ನೇ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಬೆಳಿಗ್ಗೆ 7 ಘಂಟೆಗೆ ಸ್ನೇಹ ಚೈತನ್ಯ ಚಾರಿಟೇಬಲ್ ಟ್ರಸ್ಟ್ ಹಾಗೂ ಸಿದ್ದಾಪುರ ಪೊಲೀಸ್ ಠಾಣಾ ಸಿಬ್ಬಂದಿ ವತಿಯಿಂದ ನಿಮ್ಹಾನ್ಸ್ ಆಸ್ಪತ್ರೆಯ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಲಾಗುತ್ತಿದೆ.

ಈ ಕುರಿತು ಟ್ರಸ್ಟ್ ಅಧ್ಯಕ್ಷರು ಪ್ರಕಟಣೆ ನೀಡಿದ್ದು, ಸಿದ್ದಾಪುರ ಪೊಲೀಸ್ ಸ್ಟೇಷನ್ ಮುಂಭಾಗ, ನಿಮಾನ್ಸ್ ಆಸ್ಪತ್ರೆಯ ಆವರಣದ ಬ್ಯಾಕ್ ಗೇಟ್ ಹತ್ತಿರ ರಾಷ್ಟ್ರ ಧ್ವಜಾರೋಹಣ ಸಮಾರಂಭವನ್ನು ಏರ್ಪಡಿಸಲಾಗಿದೆ. ಟ್ರಸ್ಟ್ ನ ಖಜಾಂಚಿ ಕೃಷ್ಣಕುಮಾರ್ ಸ್ವಾಗತ ಭಾಷಣ ಮಾಡಲಿದ್ದು, ಸಿದ್ದಾಪುರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಧ್ವಜಾರೋಹಣ ನೆರವೇರಿಸಲಿದ್ದಾರೆ.

ನಿಮ್ಹಾನ್ಸ್ ಆಸ್ಪತ್ರೆಯ ವೈದ್ಯಾಧಿಕಾರಿಗಳು ಸಭಿಕರನ್ನುದ್ದೇಶಿಸಿ ಅಧ್ಯಕ್ಷೀಯ ಭಾಷಣ ಮಾಡಲಿದ್ದಾರೆ. ಟ್ರಸ್ಟ್ ನ ನಿರ್ದೇಶಕರಲ್ಲೊಬ್ಬರು ವಂದನಾರ್ಪಣೆ ಮಾಡಲಿದ್ದಾರೆ.

# 'ಕ್ಲೀನ್ & ಗ್ರೀನ್ ಹಂಪಿ'ಗೆ ಕಾರ್ಯಯೋಜನೆ ಸಿದ್ಧಪಡಿಸಲು ಸೂಚನೆ


● ವಿಕ್ರಮ ವಾಹಿನಿ । ಬೆಂಗಳೂರು

ವಿಶ್ವವಿಖ್ಯಾತ ಹಂಪಿಯನ್ನು ಮತ್ತಷ್ಟು ಸ್ವಚ್ಛ, ಹಸಿರು ಹಾಗೂ ಪ್ರವಾಸಿಗರಿಗೆ ಅನುಕೂಲಕರ ತಾಣವನ್ನಾಗಿ ರೂಪಿಸುವ ಉದ್ದೇಶದಿಂದ 'ಕ್ಲೀನ್ ಅಂಡ್ ಗ್ರೀನ್ ಹಂಪಿ' ಅಭಿಯಾನಕ್ಕೆ ಸಮಗ್ರ ಕಾರ್ಯಯೋಜನೆ ಸಿದ್ಧಪಡಿಸುವಂತೆ ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪ್ರವಾಸೋದ್ಯಮ ಹಾಗೂ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ನಿರ್ದೇಶನದ ಮೇರೆಗೆ ನಡೆದ ವಿಡಿಯೊ ಸಂವಾದದಲ್ಲಿ ಹಂಪಿಯ ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಪ್ರವಾಸಿಗರಿಗೆ ಅಗತ್ಯ ಮೂಲಸೌಕರ್ಯಗಳ ಕುರಿತು ಚರ್ಚಿಸಲಾಯಿತು. ಹಂಪಿಯ ಸ್ವಚ್ಛತೆ ಕೇವಲ ಇಲಾಖೆಗಳ ಜವಾಬ್ದಾರಿಯಾಗದೆ, ಸಾರ್ವಜನಿಕರು ಮತ್ತು ಪ್ರವಾಸಿಗರ ಸಹಭಾಗಿತ್ವದಲ್ಲಿಯೇ ನಡೆಯಬೇಕು. ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ಹಾಗೂ ಪ್ರವಾಸಿಗರನ್ನು ಅಭಿಯಾನದ ಭಾಗವಾಗಿಸುವ ಕಾರ್ಯಕ್ರಮಗಳನ್ನು ರೂಪಿಸುವಂತೆ ಸೂಚಿಸಲಾಯಿತು.

ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಹಂಪಿಯ ವಿವಿಧ ಪ್ರದೇಶಗಳ ಸ್ವಚ್ಛತೆ ಮತ್ತು ನಿರ್ವಹಣೆಯನ್ನು ವ್ಯವಸ್ಥಿತವಾಗಿ ಕೈಗೊಳ್ಳಲು ಸಮಗ್ರ ಏಜೆನ್ಸಿಯನ್ನು

**"ವಿಶ್ವ ಪಾರಂಪರಿಕ ತಾಣವಾಗಿರುವ ಹಂಪಿಯ ಸಂರಕ್ಷಣೆ ಮತ್ತು ಸ್ವಚ್ಛತೆ ನಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಹಂಪಿಯನ್ನು ಕೇವಲ ಪ್ರವಾಸಿ ತಾಣವಾಗಿ ನೋಡುವುದಕ್ಕಿಂತ, ಅದರ ಪಾರಂಪರಿಕ ಮಹತ್ವವನ್ನು ಕಾಪಾಡಿಕೊಂಡು ಸ್ವಚ್ಛ, ಹಸಿರು ಹಾಗೂ ಪ್ರವಾಸಿಗರಿಗೆ ಉತ್ತಮ ಅನುಭವ ನೀಡುವ ತಾಣವನ್ನಾಗಿ ಅಭಿವೃದ್ಧಿಪಡಿಸುವುದು ನಮ್ಮ ಉದ್ದೇಶ. 'ಕ್ಲೀನ್ & ಗ್ರೀನ್ ಹಂಪಿ' ಅಭಿಯಾನದಲ್ಲಿ ಸಾರ್ವಜನಿಕರು ಮತ್ತು ಪ್ರವಾಸಿಗರ ಸಹಭಾಗಿತ್ವವನ್ನು ಖಚಿತಪಡಿಸಿಕೊಂಡು, ಹಂಪಿಯ ಸೌಂದರ್ಯ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೂ ಉಳಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು."**
**–ಪ್ರವಾಸೋದ್ಯಮ ಹಾಗೂ ಇಂಧನ ಸಚಿವ ಕೆ.ಜೆ. ಜಾರ್ಜ್**



ನೇಮಿಸಲು ಟೆಂಡರ್ ಪ್ರಕ್ರಿಯೆ ಆರಂಭಿಸುವಂತೆಯೂ ಸೂಚಿಸಲಾಗಿದೆ.

ಹಂಪಿಯ ಪಾರಂಪರಿಕ ಸ್ವರೂಪ ಹಾಗೂ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದರ ಜತೆಗೆ ಸ್ವಚ್ಛತೆ ಮತ್ತು ಪ್ರವಾಸಿಗರ ಅನುಭವಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಅಭಿಯಾನದ ಉದ್ದೇಶವಾಗಿದೆ. ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆ ಆಯುಕ್ತ ಶಿವಪ್ರಸಾದ್ ಪಿ.ಆರ್. ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮಣಿಕೆರೆ, ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ ಹಾಗೂ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಅಧಿಕಾರಿಗಳು

**"ಹಂಪಿ ಕರ್ನಾಟಕದ ಹೆಮ್ಮೆಯ ಪಾರಂಪರಿಕ ತಾಣವಾಗಿದ್ದು, ಇಲ್ಲಿನ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆ ಅತ್ಯಂತ ಪ್ರಮುಖವಾಗಿದೆ. "ಕ್ಲೀನ್ & ಗ್ರೀನ್ ಹಂಪಿ"ಯನ್ನು ಕೇವಲ ಸರ್ಕಾರಿ ಇಲಾಖೆಗಳ ಅಭಿಯಾನವನ್ನಾಗಿ ಮಾಡದೆ, ಪ್ರವಾಸೋದ್ಯಮ ಸಚಿವರ ನಿರ್ದೇಶನದಂತೆ ಸಾರ್ವಜನಿಕರು ಮತ್ತು ಪ್ರವಾಸಿಗರು ಸಕ್ರಿಯವಾಗಿ ಭಾಗವಹಿಸುವ ಜನಾಭಿಯಾನವಾಗಿ ರೂಪಿಸಲು ಸೂಚಿಸಲಾಗಿದೆ. ಸ್ವಚ್ಛತೆ, ಪ್ಲಾಸ್ಟಿಕ್ ನಿಯಂತ್ರಣ ಹಾಗೂ ಮೂಲಸೌಕರ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಸಮಗ್ರ ಕಾರ್ಯಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾಗುವುದು."**
**– ಡಾ. ರಾಮ್ ಪ್ರಸಾತ್ ಮನೋಹರ್, ಐಎಎಸ್, ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ**



# ವಿಕಾಸಸೌಧ ಕ್ಯಾಂಟೀನ್‌ಗೆ ಬೀಗ

● ವಿಕ್ರಮ ವಾಹಿನಿ । ಬೆಂಗಳೂರು

ಅಶುಚಿತ್ವ ಹಾಗೂ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ಪತ್ತೆಯಾದ ಹಿನ್ನೆಲೆಯಲ್ಲಿ ಆಹಾರ ಇಲಾಖೆ ಅಧಿಕಾರಿಗಳು ವಿಕಾಸಸೌಧದ ಕ್ಯಾಂಟೀನ್‌ಗೆ ಬೀಗ ಹಾಕಿದ್ದಾರೆ.

ಮಂತ್ರಿಗಳು ಹಾಗೂ ಹಿರಿಯ ಅಧಿಕಾರಿಗಳು ಊಟ ಮಾಡುವ ಕ್ಯಾಂಟೀನ್‌ನಲ್ಲೇ ಸ್ವಚ್ಛತೆಯ ಕೊರತೆ ಕಂಡುಬಂದಿದ್ದು, ಆಹಾರ ತಯಾರಿಸುವ ಸ್ಥಳದಲ್ಲಿ ಜಿರಳೆಗಳು ಪತ್ತೆಯಾಗಿವೆ. ಕ್ಯಾಂಟೀನ್‌ನ ಸ್ವಚ್ಛತೆ ಹಾಗೂ ಆಹಾರ ಸಂಗ್ರಹಣಾ ವ್ಯವಸ್ಥೆಯನ್ನು ಪರಿಶೀಲಿಸಿದ ಅಧಿಕಾರಿಗಳು, ನಿಯಮ ಪಾಲನೆಯಾಗದ ಹಿನ್ನೆಲೆಯಲ್ಲಿ ತಕ್ಷಣ ಕಾರ್ಯಾಚರಣೆ ಕೈಗೊಂಡಿದ್ದಾರೆ.

ಕಳೆದ ಕೆಲವು ದಿನಗಳಿಂದ ಆಹಾರ ಇಲಾಖೆ ಅಧಿಕಾರಿಗಳು ಹೋಟೆಲ್‌ಗಳು ಹಾಗೂ ಆಹಾರ ಮಳಿಗೆಗಳ ಮೇಲೆ ದಿಢೀರ್ ದಾಳಿ ನಡೆಸುತ್ತಿದ್ದಾರೆ. ತಪಾಸಣೆ ವೇಳೆ ಅವಧಿ ಮೀರಿದ ಆಹಾರ ಪದಾರ್ಥಗಳು, ಆರೋಗ್ಯಕ್ಕೆ ಹಾನಿಕರ ವಸ್ತುಗಳು ಹಾಗೂ ಸ್ವಚ್ಛತಾ ನಿಯಮಗಳ ಉಲ್ಲಂಘನೆ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಹಲವು ಕಡೆ ಕ್ರಮ ಕೈಗೊಳ್ಳಲಾಗಿದೆ.


ಸಾರ್ವಜನಿಕರಿಗೆ ಆಹಾರ ಒದಗಿಸುವ ಎಲ್ಲ ಮಳಿಗೆಗಳು ಕಡ್ಡಾಯವಾಗಿ ಸ್ವಚ್ಛತೆ ಹಾಗೂ ಆಹಾರ ಸುರಕ್ಷತಾ ನಿಯಮಗಳನ್ನು ಪಾಲಿಸಬೇಕು. ಉಲ್ಲಂಘನೆ ಕಂಡುಬಂದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಎಚ್ಚರಿಸಿದ್ದಾರೆ.

# ಭಕ್ತರ ಚಿನ್ನ ಬಿಸ್ಕತ್ ಮಾಡಲು ಟಿಟಿಡಿ ನಿರ್ಧಾರ

● ವಿಕ್ರಮ ವಾಹಿನಿ । ತಿರುಮಲ

ತಿರುಪತಿ ವೆಂಕಟೇಶ್ವರ ದೇವಸ್ಥಾನದ ಹುಂಡಿಗೆ ಭಕ್ತರು ಅರ್ಪಿಸುವ ಚಿನ್ನಾಭರಣಗಳ ನಿರ್ವಹಣೆಯಲ್ಲಿ ಬದಲಾವಣೆ ತರಲು ತಿರುಮಲ ತಿರುಪತಿ ದೇವಸ್ಥಾನಂ (ಟಿಟಿಡಿ) ಮುಂದಾಗಿದೆ. ಹುಂಡಿಯಲ್ಲಿ ಸಂಗ್ರಹವಾಗುವ ಚಿನ್ನವನ್ನು ನೇರವಾಗಿ ಮಾರಾಟ ಮಾಡುವ ಬದಲು ಚಿನ್ನದ ಬಿಸ್ಕತ್‌ಗಳಾಗಿ ಪರಿವರ್ತಿಸಿ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಠೇವಣಿ ಇಡುವ ಪ್ರಸ್ತಾವ ಸಿದ್ಧಪಡಿಸಿದೆ.

ದೇವಾಲಯದ ಅಗತ್ಯಗಳಿಗೆ ಬಳಸಲು ಚಿನ್ನವನ್ನು ಸಂಗ್ರಹಿಸುವುದು ಹಾಗೂ ಅದರ ಮೂಲಕ ಬಡ್ಡಿ ಆದಾಯ ಪಡೆಯುವುದು ಈ ಕ್ರಮದ ಉದ್ದೇಶ ವಾಗಿದೆ. ಅಗತ್ಯವಿದ್ದಾಗ ದೇವರ ಆಭರಣ ಸೇರಿದಂತೆ ಧಾರ್ಮಿಕ ಕಾರ್ಯಗಳಿಗೆ ಈ ಚಿನ್ನ ಬಳಸಲು ಅವಕಾಶ ಕಲ್ಪಿಸುವ ಉದ್ದೇಶವಿದೆ. ಇನ್ನು ಚಿನ್ನಾಭರಣಗಳಲ್ಲಿರುವ ವಜ್ರ, ರತ್ನ ಹಾಗೂ ಇತರ ಅಮೂಲ್ಯ ಕಲ್ಲುಗಳನ್ನು ಪ್ರತ್ಯೇಕಿಸಿ ಹರಾಜು ಹಾಕುವ ಪ್ರಸ್ತಾವವೂ ಇದೆ. ಹರಾಜಿನಿಂದ ದೊರೆಯುವ ಮೊತ್ತವನ್ನು ಮತ್ತೆ ಚಿನ್ನ ಖರೀದಿಸಿ ಬ್ಯಾಂಕ್‌ಗಳಲ್ಲಿ ಠೇವಣಿ ಇಡುವ ಕುರಿತು ಚಿಂತಿಸಲಾಗಿದೆ. ಆಭರಣಗಳ ಮೌಲ್ಯಮಾಪನವನ್ನು ಟಿಟಿಡಿ ಮೌಲ್ಯಮಾಪಕರು, ಮಾನ್ಯತೆ ಪಡೆದ ರತ್ನಶಾಸ್ತ್ರಜ್ಞರು ಹಾಗೂ ಸರ್ಕಾರಿ ಟಂಕಸಾಲೆ ತಜ್ಞರು ನಡೆಸುವಂತೆ ಪ್ರಸ್ತಾವಿಸಲಾಗಿದೆ. ತಜ್ಞರ ಸಮಿತಿ ಮತ್ತು ಸರ್ಕಾರದ ಅನುಮೋದನೆ ಬಳಿಕ ಈ ನಿಯಮಗಳು ಜಾರಿಗೆ ಬರುವ ಸಾಧ್ಯತೆಯಿದೆ. ಆದರೆ, ಭಕ್ತರು ನಂಬಿಕೆಯಿಂದ ಅರ್ಪಿಸುವ ಚಿನ್ನಾಭರಣಗಳಲ್ಲಿನ ರತ್ನಗಳನ್ನು ಹರಾಜು ಮಾಡುವ ಅಧಿಕಾರ ಟಿಟಿಡಿಗೆ ಇದೆಯೇ ಎಂಬ ಪ್ರಶ್ನೆಯೂ ಕೇಳಿಬಂದಿದ್ದು, ಈ ಕುರಿತು ಕಾನೂನು ಪರಿಶೀಲನೆ ಮತ್ತು ಸ್ಪಷ್ಟ ನಿಯಮಗಳ ಅಗತ್ಯವಿದೆ.



# ಇಂದು ಬೆಂಗಳೂರಿನಲ್ಲಿ ದಿವ್ಯ ಸಂಜೆ

● ವಿಕ್ರಮ ವಾಹಿನಿ । ಬೆಂಗಳೂರು

ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯಲ್ಲಿರುವ ಸತ್ಯ ಸಾಯಿ ಗ್ರಾಮದ 50ನೇ ವರ್ಷದ ಸುವರ್ಣ ಸಂಭ್ರಮದ ಅಂಗವಾಗಿ ಬೆಂಗಳೂರಿನಲ್ಲಿ ಇದೇ ಶುಕ್ರವಾರದಂದು ಆ.14 ರಂದು ಸಂಜೆ ದಿವ್ಯ ಸಂಜೆ ಎಂಬ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. 'ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್'ನ ಸಂಸ್ಥಾಪಕ ಹಾಗೂ ಜಾಗತಿಕ ಮಾನವತಾವಾದಿ ಸದ್ಗುರು ಶ್ರೀ ಮಧುಸೂದನ ಸಾಯಿ ಅವರೊಂದಿಗೆ ವಿಶೇಷ ಸಂವಾದ ನಡೆಯಲಿದೆ. ಬಳಿಕ, ಗಿನ್ನೆಸ್ ದಾಖಲೆ ಮಾಡಿರುವ ಸಾಯಿ ಸಿಂಫನಿ ತಂಡದಿಂದ ಆರ್ಕೆಸ್ಟ್ರಾ ಸಂಗೀತ ಕಾರ್ಯಕ್ರಮ ಇರಲಿದೆ. ಬೆಂಗಳೂರಿನ ಜಯಮಹಲ್ ಮುಖ್ಯ ರಸ್ತೆಯ ಚಾಮುಂಡಿ ಹೋಟೆಲ್ ಪ್ರೈವೇಟ್ ಲಿಮಿಟೆಡ್ ನ ಚಾಮರ ವಜ್ರ ದಲ್ಲಿ ಸಂಜೆ 5 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ ಎಂದು ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಘಟಕರು ತಿಳಿಸಿದ್ದಾರೆ.



www.VIKRAMAVAHINI.com

ಕನ್ನಡ ದಿನಪತ್ರಿಕೆ

PRGI NO: KARKAN/2018/78481

ವಿಕ್ರಮ ವಾಹಿನಿ

# ಫ್ರೀಡಂ ಹಬ್ಬ ಆಚರಣೆಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ: ಮಹೇಶ್ವರ್ ರಾವ್

● ವಿಕ್ರಮ ವಾಹಿನಿ | ಬೆಂಗಳೂರು

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಗಸ್ಟ್ 15ರಂದು ವಿಧಾನಸೌಧದ ಮುಂಭಾಗ ಆಯೋಜಿಸಿರುವ 'ಫ್ರೀಡಂ ಹಬ್ಬ'ಕ್ಕೆ ಎಲ್ಲ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.



ನಾಗರಿಕರು ಸ್ವಾತಂತ್ರ್ಯ ದಿನವನ್ನು ಹಬ್ಬದ ರೀತಿಯಲ್ಲಿ ಆಚರಿಸುವ ಉದ್ದೇಶದಿಂದ ಪೆರೇಡ್, ಜಾನಪದ ಕಲಾ ಪ್ರದರ್ಶನ, ಸಂಗೀತ, ಮಕ್ಕಳ ಮೇಳ, ಕರಕುಶಲ ವಸ್ತುಗಳ ಮಳಿಗೆ, ಸ್ವಾತಂತ್ರ್ಯ ಹೋರಾಟದ ಪರಿಚಯ ನೀಡುವ 'ಸ್ವಾತಂತ್ರ್ಯ ಪಯಣ' ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಭಾರತದ ವಿವಿಧ ಸಂಸ್ಕೃತಿ ಹಾಗೂ ಕರ್ನಾಟಕದ ವೈವಿಧ್ಯತೆಯನ್ನು ಬಿಂಬಿಸುವ ಸುಮಾರು 25 ಕಲಾತಂಡಗಳು ಪೆರೇಡ್‌ನಲ್ಲಿ ಭಾಗವಹಿಸಲಿವೆ.

ಅಂಬೇಡ್ಕರ್ ವೀದಿಯಲ್ಲಿ ಜೀವನಶೈಲಿ ಉತ್ಪನ್ನಗಳು, ಕರಕುಶಲ ವಸ್ತುಗಳು, ಜವಳಿ, ಆಟಿಕೆಗಳು ಹಾಗೂ ಆಹಾರ ಸೇರಿದಂತೆ 120ಕ್ಕೂ ಹೆಚ್ಚು ಮಳಿಗೆಗಳು ಇರಲಿವೆ. ವಿಧಾನಸೌಧದ ಪ್ರವಾಸಕ್ಕೂ ಅವಕಾಶ ಕಲ್ಪಿಸಲಾಗಿದ್ದು, ಮಕ್ಕಳಿಗೆ ಮಾರ್ಗದರ್ಶಕರೊಂದಿಗೆ ನಿಗದಿತ ಅವಧಿಯಲ್ಲಿ ಪ್ರವಾಸ ನಡೆಸಲಾಗುವುದು.

ಸಂಜೆ ನಡೆಯುವ ಸಂಗೀತ ಕಾರ್ಯಕ್ರಮದಲ್ಲಿ ಸಂಜಿತ್ ಹೆಗ್ಡೆ, ರಘು ದೀಕ್ಷಿತ್, ಸಿದ್ಧಾರ್ಥ ಬೆಳಮಣ್ಣು, ಎಂ.ಡಿ. ಪಲ್ಲವಿ ಸೇರಿದಂತೆ ಹಲವು ಪ್ರಮುಖ ಕಲಾವಿದರು ಭಾಗವಹಿಸಲಿದ್ದಾರೆ. ವಿವಿಧ ಭಾರತೀಯ ಭಾಷೆಗಳಲ್ಲಿ ಸಂಗೀತ ಕಾರ್ಯಕ್ರಮ ನಡೆಯಲಿದ್ದು, ಸಾಮೂಹಿಕ ಗಾಯನದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಳ್ಳಲಿದೆ.

ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮಾತನಾಡಿ, ಮಧ್ಯಾಹ್ನ 12ರಿಂದ ರಾತ್ರಿ 10ರವರೆಗೆ ಕಾರ್ಯಕ್ರಮ ನಡೆಯಲಿದ್ದು, ನೋಂದಣಿ ಮಾಡಿಕೊಂಡವರಿಗೆ ಮಾತ್ರ ಪ್ರವೇಶವಿದೆ. ಈಗಾಗಲೇ 18 ಸಾವಿರಕ್ಕೂ ಹೆಚ್ಚು ಮಂದಿ ನೋಂದಣಿ ಮಾಡಿಕೊಂಡಿದ್ದಾರೆ. ಒಂದು ಪ್ರವೇಶ ಸಂಕೇತಕ್ಕೆ ಒಬ್ಬರಿಗೆ ಮಾತ್ರ ಅವಕಾಶ ನೀಡಲಾಗುವುದು ಎಂದರು.

ಭದ್ರತಾ ದೃಷ್ಟಿಯಿಂದ ಸಿವಿಲ್ ಪೊಲೀಸ್ ಹಾಗೂ ಕೆಎಸ್‌ಆರ್‌ಪಿ ಸೇರಿದಂತೆ 3,000ಕ್ಕೂ ಹೆಚ್ಚು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. 18 ಪ್ರವೇಶ ದ್ವಾರಗಳನ್ನು ಸ್ಥಾಪಿಸಲಾಗಿದ್ದು, ವಿಧಾನಸೌಧ ಪ್ರವೇಶಕ್ಕೆ ಗುರುತಿನ ಚೀಟಿ ಕಡ್ಡಾಯವಾಗಿದೆ. 12 ವರ್ಷದೊಳಗಿನ ಮಕ್ಕಳಿಗೆ ನೋಂದಣಿ ಅಗತ್ಯವಿಲ್ಲ. ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ವಿಶೇಷ ವ್ಯವಸ್ಥೆ ಕಲ್ಪಿಸಲಾಗುವುದು.

ಕಾರ್ಯಕ್ರಮದ ದಿನ ಅಂಬೇಡ್ಕರ್ ವೀದಿಯನ್ನು ಬೆಳಗ್ಗೆ 11ರಿಂದ ಬಂದ್ ಮಾಡಲಾಗುವುದು. ವಿಧಾನಸೌಧ ಮೆಟ್ರೊ ನಿಲ್ದಾಣವೂ ಮುಚ್ಚಿರಲಿದ್ದು, ವಿಶ್ವೇಶ್ವರಯ್ಯ ಹಾಗೂ ಕಬ್ಬನ್ ಪಾರ್ಕ್ ಮೆಟ್ರೊ ನಿಲ್ದಾಣಗಳಿಂದ ಕಾರ್ಯಕ್ರಮ ಸ್ಥಳಕ್ಕೆ ತೆರಳಲು ಅವಕಾಶವಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಹಾಗೂ ಮೆಟ್ರೊ ಸೇವೆ, ನಿಗದಿತ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುವುದು.

ಕಾರ್ಯಕ್ರಮದ ಸ್ಥಳದಲ್ಲಿ 80 ಜೈವಿಕ ಶೌಚಾಲಯ, ಕುಡಿಯುವ ನೀರಿನ ಕೇಂದ್ರಗಳು, ಎರಡು ಪ್ರಥಮ ಚಿಕಿತ್ಸಾ ಕೇಂದ್ರಗಳು ಹಾಗೂ ನಾಲ್ಕು ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸಲಾಗಿದೆ. ಎರಡು ಅಗ್ನಿಶಾಮಕ ವಾಹನಗಳನ್ನೂ ಸನ್ನದ್ಧವಾಗಿಡಲಾಗಿದೆ. 'ನಿಮಗೆ ಸಹಾಯ ಮಾಡಬೇಕೇ?' ಎಂಬ ಗುರುತಿನ ಟಿ–ಶರ್ಟ್ ಧರಿಸಿರುವ ಸ್ವಯಂಸೇವಕರು ಸಾರ್ವಜನಿಕರಿಗೆ ಮಾರ್ಗದರ್ಶನ ನೀಡಲಿದ್ದಾರೆ.

ಮಹಿಳೆಯರಿಗಾಗಿ ವಿಶೇಷ ಸಹಾಯ ಕೇಂದ್ರ, ಶಿಶುಗಳಿಗೆ ಹಾಲುಣಿಸುವ ಕೊಠಡಿ ಹಾಗೂ ವಿಶ್ರಾಂತಿ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಕಾರ್ಯಕ್ರಮವನ್ನು ನೇರ ಪ್ರಸಾರದ ಮೂಲಕ ವೀಕ್ಷಿಸುವ ಅವಕಾಶವಿದ್ದು, ವಿಧಾನಸೌಧದ ಆವರಣದಲ್ಲಿ ದೊಡ್ಡ ಪರದೆಗಳ ವ್ಯವಸ್ಥೆಯನ್ನೂ ಮಾಡಲಾಗಿದೆ.



ಹರ್ ಘರ್ ತಿರಂಗ ಅಭಿಯಾನದ ಅಂಗವಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಗುರುವಾರ ತಮ್ಮ ನಿವಾಸದಲ್ಲಿ ರಾಷ್ಟ್ರಧ್ವಜ ಹಾರಿಸಿದರು.

# ಸ್ವಯಂ ಅಹಂಕಾರದಿಂದ ಇಡೀ ಅಧಿವೇಶನ ಹಳಿ ತಪ್ಪಿಸಿದ ಪ್ರತಿಪಕ್ಷ ನಾಯಕ

● ವಿಕ್ರಮ ವಾಹಿನಿ | ನವದೆಹಲಿ

**ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರ ವರ್ತನೆಯಿಂದ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ರಚನಾತ್ಮಕ ಚರ್ಚೆಗಳಿಗೆ ಅವಕಾಶ ಸಿಗಲಿಲ್ಲ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದರು.**

**ಗುರುವಾರ ಸಂಸತ್ ಭವನದ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ವಿಚಾರಗಳ ಕುರಿತು ಸರ್ಕಾರ ಚರ್ಚೆಗೆ ಸಿದ್ಧವಿತ್ತು. ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರು ಪ್ರತಿಪಕ್ಷಗಳ ಪ್ರಶ್ನೆಗಳಿಗೆ ಉತ್ತರಿಸಲು ಸಿದ್ಧರಿದ್ದರೂ, ರಾಹುಲ್ ಗಾಂಧಿ ಗದ್ದಲಕ್ಕೆ ಮುಂದಾದರು ಎಂದು ಟೀಕಿಸಿದರು.**



**'ಚರ್ಚೆಗೆ ಸಿದ್ಧವಿದ್ದರೂ ಪಲಾಯನ'**

**ಸಂಸದೀಯ ಸಚಿವ ಕಿರಣ್ ರಿಜಿಜು ಹಾಗೂ ಗೃಹ ಸಚಿವ ಅಮಿತ್ ಶಾ ಅವರು ಸದನದಲ್ಲಿ ಉತ್ತರ ನೀಡಲು ಸಿದ್ಧ ಎಂದು ಮೊದಲೇ ತಿಳಿಸಿದ್ದರು. ಆದರೂ ಪ್ರತಿಪಕ್ಷ ನಾಯಕರು ಚರ್ಚೆಗೆ ಮುಂದಾಗದೆ ಗದ್ದಲ ನಡೆಸಿದರು. ಬೇಡಿಕೆಗಳನ್ನು ಮುಂದಿಟ್ಟ ಬಳಿಕ ಅವುಗಳ ಕುರಿತು ಚರ್ಚೆಗೆ ಅವಕಾಶ ದೊರೆತಾಗ ಸದನದಿಂದ ಹೊರನಡೆಯುವುದು ಯಾವ ರೀತಿಯ ಸಂಸದೀಯ ನಡೆ ಎಂದು ಜೋಶಿ ಪ್ರಶ್ನಿಸಿದರು.**

**ದೆಹಲಿಯಲ್ಲಿ ಮಾತ್ರ ಗದ್ದಲ ಏಕೆ?**

**ರಾಹುಲ್ ಗಾಂಧಿ ಅವರು ದೆಹಲಿಯಲ್ಲಿ ಮಾತ್ರ ಪ್ರತಿಭಟನೆ ಮತ್ತು ಗದ್ದಲಕ್ಕೆ ಮುಂದಾಗುತ್ತಿದ್ದಾರೆ. ಕಾಂಗ್ರೆಸ್ ಆಡಳಿತವಿರುವ ಪಂಜಾಬ್ ಹಾಗೂ ಜಾರ್ಖಂಡ್‌ಗಳಲ್ಲಿ ಇದೇ ವಿಚಾರಗಳ ಬಗ್ಗೆ ಏಕೆ ಪ್ರಶ್ನಿಸುತ್ತಿಲ್ಲ? ಅಲ್ಲಿನ ಸರ್ಕಾರಗಳ ವಿರುದ್ಧ ಏಕೆ ಹೋರಾಟ ನಡೆಸುತ್ತಿಲ್ಲ ಎಂದು ಜೋಶಿ ಪ್ರಶ್ನಿಸಿದರು.**

**ಸಂಸತ್ತು ಚರ್ಚೆ ಮತ್ತು ಜನರ ಸಮಸ್ಯೆಗಳ ಕುರಿತು ರಚನಾತ್ಮಕ ವಿಚಾರ ವಿನಿಮಯಕ್ಕೆ ಇರುವ ವೇದಿಕೆ. ಆದರೆ, ಸದನದ ಕಲಾಪಕ್ಕೆ ಅಡ್ಡಿಪಡಿಸುವ ಮೂಲಕ ಅಧಿವೇಶನದ ಉದ್ದೇಶವನ್ನೇ ಹಾಳು ಮಾಡಲಾಗಿದೆ ಎಂದು ಅವರು ಆರೋಪಿಸಿದರು.**

**ಜೋಶಿ ಮಾತನಾಡಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಪ್ರತಿಪಕ್ಷಗಳು ಪ್ರಸ್ತಾಪಿಸಿದ ಹಲವು ವಿಷಯಗಳ ಕುರಿತು ಸರ್ಕಾರ ಸದನದಲ್ಲಿ ಉತ್ತರ ನೀಡಲು ಸಿದ್ಧವಿತ್ತು.**


**ಸಂಸದೀಯ ಸಚಿವ ಕಿರಣ್ ರಿಜಿಜು ಹಾಗೂ ಗೃಹ ಸಚಿವ ಅಮಿತ್ ಶಾ ಅವರು ಚರ್ಚೆಗೆ ಸಿದ್ಧ ಎಂದು ಸ್ಪಷ್ಟಪಡಿಸಿದ್ದರೂ, ಪ್ರತಿಪಕ್ಷಗಳು ಸದನದ ಕಲಾಪಕ್ಕೆ ಅವಕಾಶ ನೀಡಲಿಲ್ಲ ಎಂದು ಆರೋಪಿಸಿದರು.**

**ಸಂಸತ್ ಕಲಾಪ ಸುಗಮವಾಗಿ ನಡೆಯಲು ಆಡಳಿತ ಮತ್ತು ಪ್ರತಿಪಕ್ಷಗಳ ಸಹಕಾರ ಅಗತ್ಯ. ಜನರ ಸಮಸ್ಯೆಗಳು ಹಾಗೂ ದೇಶದ ಪ್ರಮುಖ ವಿಚಾರಗಳ ಕುರಿತು ಆರೋಗ್ಯಕರ ಚರ್ಚೆ ನಡೆಯಬೇಕಾಗಿದ್ದು, ಗದ್ದಲದಿಂದ ಸದನದ ಅಮೂಲ್ಯ ಸಮಯ ವ್ಯರ್ಥವಾಗಬಾರದು ಎಂದು ಪ್ರಲ್ಹಾದ ಜೋಶಿ ಹೇಳಿದರು.**

# 'ವಾಲ್ಮೀಕಿ ಬಗ್ಗೆ ಗೌರವವಿದ್ದರೆ ರಾಜೀನಾಮೆ ನೀಡಿ'

● ವಿಕ್ರಮ ವಾಹಿನಿ | ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದ ಆರೋಪ ಎದುರಿಸುತ್ತಿರುವ ಸಚಿವ ಬಿ.ನಾಗೇಂದ್ರ ಅವರು ವಾಲ್ಮೀಕಿ ಸಮಾಜದ ಬಗ್ಗೆ ಗೌರವ ಹೊಂದಿದ್ದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ₹185 ಕೋಟಿ ಅಕ್ರಮದ ಪ್ರಕರಣದಲ್ಲಿ ನಾಗೇಂದ್ರ ಅವರ ವಿರುದ್ಧ ಆರೋಪಪಟ್ಟಿ ಸಲ್ಲಿಕೆಯಾಗಿದೆ. ತನಿಖೆ ಪೂರ್ಣಗೊಂಡು ಅವರು ನಿರಪರಾಧಿ ಎಂದು ಸಾಬೀತಾಗುವವರೆಗೆ ಸಚಿವ ಸ್ಥಾನದಲ್ಲಿ ಮುಂದುವರಿಯುವುದು ಸರಿಯಲ್ಲ ಎಂದು ಹೇಳಿದರು. ನಾಗೇಂದ್ರ ಅವರ ವಿರುದ್ಧ ಬಿಜೆಪಿಗೆ ಯಾವುದೇ ವೈಯಕ್ತಿಕ ದ್ವೇಷವಿಲ್ಲ. ಆರೋಪಗಳಿಂದ ಮುಕ್ತರಾದ ಬಳಿಕ ಅವರು ಸಚಿವರಾದರೆ ನಮ್ಮ ಆಕ್ಷೇಪವಿಲ್ಲ ಎಂದರು.


ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡ ಪ್ರಕರಣವನ್ನೂ ಪ್ರಸ್ತಾಪಿಸಿದ ವಿಜಯೇಂದ್ರ, ಅವರ ಕುಟುಂಬಕ್ಕೆ ಇನ್ನೂ ಗ್ರಾಚ್ಯುಟಿ ಮತ್ತು ಪಿಂಚಣಿ ದೊರೆತಿಲ್ಲ ಎಂದು ಆರೋಪಿಸಿದರು. ಮೃತ ಅಧಿಕಾರಿಯ ಪುತ್ರನಿಗೆ ಅವರ ಹುದ್ದೆಗೆ ತಕ್ಕ ಉದ್ಯೋಗ ನೀಡದೆ ಜವಾನನ ಕೆಲಸ ನೀಡಿರುವುದು ಕುಟುಂಬಕ್ಕೆ ಮಾಡಿದ ಅಪಮಾನ ಎಂದು ಟೀಕಿಸಿದರು.

ನಾಗೇಂದ್ರ ರಾಜೀನಾಮೆ ನೀಡುವಂತೆ ವಿಧಾನಸಭೆಯ ಒಳಗೂ ಹೊರಗೂ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು. ಇದೇ ವೇಳೆ, ರಾಜ್ಯ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡದಿರುವುದನ್ನೂ ಅವರು ಪ್ರಶ್ನಿಸಿದರು. ಬಸವಣ್ಣ ಮತ್ತು ಅಕ್ಕಮಹಾದೇವಿಯವರ ನಾಡಿನಲ್ಲಿ ಮಹಿಳೆಯರಿಗೆ ಸಚಿವ ಸ್ಥಾನ ನೀಡದಿರುವುದು ಸರ್ಕಾರದ ಮಹಿಳಾ ವಿರೋಧಿ ಧೋರಣೆಯನ್ನು ತೋರಿಸುತ್ತದೆ ಎಂದು ಆರೋಪಿಸಿದರು.

# ಹಲದ್ವಾನಿ ಶುದ್ಧೀಕರಣ ಕಾರ್ಯ ಹಿಂದುಳಿದ-ದಲಿತರ ವಿಭಜಕಕ್ಕೆ ನಾಂದಿ: ರಮೇಶ್ ಬಾಬು

● ವಿಕ್ರಮ ವಾಹಿನಿ | ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಉತ್ತರಾಖಂಡದ ಹಲ್ದ್ವಾನಿಯಲ್ಲಿ ಸಾರ್ವಜನಿಕ ಸಭೆ ನಡೆಸಿದ ಬಳಿಕ ರಾಮಲೀಲಾ ಮೈದಾನದಲ್ಲಿ ನಡೆದ 'ಶುದ್ಧೀಕರಣ' ಕಾರ್ಯವನ್ನು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ತೀವ್ರವಾಗಿ ಖಂಡಿಸಿದ್ದಾರೆ.



ಖರ್ಗೆ ಅವರ ಜಾತಿ ಹಿನ್ನೆಲೆಯನ್ನು ಮುಂದಿಟ್ಟುಕೊಂಡು ಇಂತಹ ಆಚರಣೆ ನಡೆಸಿರುವುದು ಸಾಮಾಜಿಕ ತಾರತಮ್ಯ ಮತ್ತು ಅಸ್ಪೃಶ್ಯತೆಯ ಮನೋಭಾವವನ್ನು ತೋರಿಸುತ್ತದೆ ಎಂದು ಅವರು ಆರೋಪಿಸಿದ್ದಾರೆ. ಘಟನೆಗೆ ಕಾರಣವಾದ ಸಂಘಟನೆ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಸಮಾನತೆ, ಭ್ರಾತೃತ್ವ ಹಾಗೂ ಸಂವಿಧಾನಾತ್ಮಕ ಹಕ್ಕುಗಳ ಪರ ಕಾಂಗ್ರೆಸ್ ನಿಂತಿದೆ. ಜಾತಿ, ಧರ್ಮ ಅಥವಾ ಸಾಮಾಜಿಕ ಹಿನ್ನೆಲೆಯ ಆಧಾರದಲ್ಲಿ ಯಾರನ್ನೂ ಅವಮಾನಿಸುವುದಕ್ಕೆ ಸಂವಿಧಾನಾತ್ಮಕ ಭಾರತದಲ್ಲಿ ಅವಕಾಶವಿಲ್ಲ. ಇಂತಹ ಘಟನೆಗಳು ಜಾತಿ ತಾರತಮ್ಯದ ವಿರುದ್ಧದ ಹೋರಾಟ ಇನ್ನೂ ಅಗತ್ಯವಿದೆ ಎಂಬುದನ್ನು ತೋರಿಸುತ್ತವೆ ಎಂದು ರಮೇಶ್ ಬಾಬು ಹೇಳಿದ್ದಾರೆ.

ಬಿಜೆಪಿ ಹಾಗೂ ಸಂಘ ಪರಿವಾರ ಈ ಘಟನೆಯ ಕುರಿತು ಸ್ಪಷ್ಟನೆ ನೀಡಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ನಿಮ್ಹಾನ್ಸ್‌ನಲ್ಲಿ ಸ್ನೇಹ ಚೈತನ್ಯ ಟ್ರಸ್ಟ್‌ನಿಂದ ಧ್ವಜಾರೋಹಣ


● ವಿಕ್ರಮ ವಾಹಿನಿ | ಬೆಂಗಳೂರು

ಭಾರತಕ್ಕೆ ಸ್ವಾತಂತ್ರ್ಯ ಲಭಿಸಿ 80 ವಸಂತಗಳು ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಇದೇ ಆಗಸ್ಟ್ 14 ರಂದು 80 ನೇ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಬೆಳಿಗ್ಗೆ 7 ಘಂಟೆಗೆ ಸ್ನೇಹ ಚೈತನ್ಯ ಚಾರಿಟೇಬಲ್ ಟ್ರಸ್ಟ್ ಹಾಗೂ ಸಿದ್ದಾಪುರ ಪೊಲೀಸ್ ಠಾಣಾ ಸಿಬ್ಬಂದಿ ವತಿಯಿಂದ ನಿಮ್ಹಾನ್ಸ್ ಆಸ್ಪತ್ರೆಯ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಲಾಗುತ್ತಿದೆ.

ಈ ಕುರಿತು ಟ್ರಸ್ಟ್ ಅಧ್ಯಕ್ಷರು ಪ್ರಕಟಣೆ ನೀಡಿದ್ದು, ಸಿದ್ದಾಪುರ ಪೊಲೀಸ್ ಸ್ಟೇಷನ್ ಮುಂಭಾಗ, ನಿಮಾನ್ಸ್ ಆಸ್ಪತ್ರೆಯ ಆವರಣದ ಬ್ಯಾಕ್ ಗೇಟ್ ಹತ್ತಿರ ರಾಷ್ಟ್ರ ಧ್ವಜಾರೋಹಣ ಸಮಾರಂಭವನ್ನು ಏರ್ಪಡಿಸಲಾಗಿದೆ. ಟ್ರಸ್ಟ್ ನ ಖಜಾಂಚಿ ಕೃಷ್ಣಕುಮಾರ್ ಸ್ವಾಗತ ಭಾಷಣ ಮಾಡಲಿದ್ದು, ಸಿದ್ದಾಪುರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಧ್ವಜಾರೋಹಣ ನೆರವೇರಿಸಲಿದ್ದಾರೆ.

ನಿಮ್ಹಾನ್ಸ್ ಆಸ್ಪತ್ರೆಯ ವೈದ್ಯಾಧಿಕಾರಿಗಳು ಸಭಿಕರನ್ನುದ್ದೇಶಿಸಿ ಅಧ್ಯಕ್ಷೀಯ ಭಾಷಣ ಮಾಡಲಿದ್ದಾರೆ. ಟ್ರಸ್ಟ್ ನ ನಿರ್ದೇಶಕರಲ್ಲೊಬ್ಬರು ವಂದನಾರ್ಪಣೆ ಮಾಡಲಿದ್ದಾರೆ. ವಂದೇ ಮಾತರಂ ಗೀತೆ ಹಾಗೂ ರಾಷ್ಟ್ರಗೀತೆ ಯೊಂದಿಗೆ ರಾಷ್ಟ್ರಧ್ವಜಕ್ಕೆ ನಮನ ಮಾಡುತ್ತಿದ್ದು ನಂತರ ಸಭಿಕರೆಲ್ಲರಿಗೂ ಸಿಹಿ ವಿತರಣೆ ಹಾಗೂ ಅನ್ನದಾನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಟ್ರಸ್ಟಿನ ಎಲ್ಲಾ ಸದಸ್ಯರು ಹಾಗೂ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಅವರು ಕೋರಿದ್ದಾರೆ.

# ದರ್ಶನ್ ಮೇಲ್ಮನವಿ ವಜಾ



● ವಿಕ್ರಮ ವಾಹಿನಿ | ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಹೈಕೋರ್ಟ್‌ನಲ್ಲಿ ಮತ್ತೊಮ್ಮೆ ಹಿನ್ನಡೆಯಾಗಿದೆ. ಪ್ರಕರಣದ 14ನೇ ಆರೋಪಿ ಪ್ರದೋಷ್ ಮಾಫಿ ಸಾಕ್ಷಿಯಾಗಲು ಸಲ್ಲಿಸಿರುವ ಅರ್ಜಿಗೆ ಸಂಬಂಧಿಸಿದಂತೆ 59ನೇ ಸಿಸಿಹೆಚ್ ಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ದರ್ಶನ್ ಸಲ್ಲಿಸಿದ್ದ ಮೇಲ್ಮನವಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠವು ಅರ್ಜಿಯ ವಿಚಾರಣೆ ನಡೆಸಿ, ಇದೇ ವಿಚಾರಕ್ಕೆ ಸಂಬಂಧಿಸಿದಂತೆ ವಿನಯ್ ಕುಲಕರ್ಣಿ ಪ್ರಕರಣದಲ್ಲಿ ಹೈಕೋರ್ಟ್ ನೀಡಿದ್ದ ತೀರ್ಪನ್ನು ಸುಪ್ರೀಂ ಕೋರ್ಟ್ ಕೂಡ ಎತ್ತಿಹಿಡಿದಿದೆ. ಹೀಗಾಗಿ 59ನೇ ಸಿಸಿಹೆಚ್ ಕೋರ್ಟ್ ಆದೇಶದಲ್ಲಿ ಮಧ್ಯಪ್ರವೇಶಿಸುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ.


ಮಾಫಿ ಸಾಕ್ಷಿಯಾಗಲು ಪ್ರದೋಷ್ ಸಲ್ಲಿಸಿರುವ ಅರ್ಜಿಯ ಪ್ರತಿಯನ್ನು ತಮಗೆ ನೀಡಿಲ್ಲ. ಪ್ರಕ್ರಿಯೆಯಲ್ಲಿನ ಲೋಪವನ್ನು ಪ್ರಶ್ನಿಸಲು ಅವಕಾಶ ನೀಡಬೇಕು ಎಂದು ದರ್ಶನ್ ಪರ ಹಿರಿಯ ವಕೀಲ ಹಷ್ಮತ್ ಪಾಷಾ ವಾದಿಸಿದರು.

ಆದರೆ, ಮಾಫಿ ಸಾಕ್ಷಿಯಾಗುವ ಪ್ರಕ್ರಿಯೆಯನ್ನು ಸಹ ಆರೋಪಿಗಳು ಆಕ್ಷೇಪಿಸಲು ಹಕ್ಕು ಹೊಂದಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿತು. ಮಾಫಿ ಸಾಕ್ಷಿಯಾಗಿ ಅಂಗೀಕರಿಸಿದ ಬಳಿಕವೇ ಪ್ರಕ್ರಿಯೆಯಲ್ಲಿನ ಲೋಪಗಳ ಬಗ್ಗೆ ಪ್ರಶ್ನಿಸಲು ಅವಕಾಶವಿದೆ ಎಂದು ನ್ಯಾಯಪೀಠ ತಿಳಿಸಿತು.

# 'ಪ್ರತಿಯೊಬ್ಬ ಜೀವಿಯೊಳಗೂ ಅಗ್ನಿರೂಪದಲ್ಲಿ ಭಗವಂತ ನೆಲಸಿದ್ದಾನೆ'

● ವಿಕ್ರಮ ವಾಹಿನಿ | ಗೋಕರ್ಣ

ಆಹಾರವನ್ನು ಜೀರ್ಣವಾಗಿಸಿ ದೇಹಕ್ಕೆ ಚೈತನ್ಯವನ್ನು ತುಂಬುವುದು ಜಠರಾಗ್ನಿಯ ದೊಡ್ಡ ಪವಾಡವಾಗಿದ್ದು, ಸೇವಿಸಿದ ಆಹಾರವನ್ನೇ ದೇಹ ಹಾಗೂ ಜೀವಿಯ ಭಾವವನ್ನಾಗಿ ಪರಿವರ್ತಿಸುವುದು ನಿಜವಾಗಿ ಚಮತ್ಕಾರವೇ ಆಗಿದೆ. ಈ ಕ್ರಿಯೆ ನಿತ್ಯ ಸ್ವಯಂಚಾಲಿತವಾಗಿ ನಡೆಯುತ್ತಿರುವುದರಿಂದ ಇದು ದೊಡ್ಡ ಪವಾಡವೆಂಬುದು ನಮಗೆ ಭಾಸವಾಗುತ್ತಿಲ್ಲವಷ್ಟೇ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.



ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 13.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ 'ಜಠರಾಗ್ನಿ'ಯ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ವಾಹನದಲ್ಲಿ 'ಸ್ಪಾರ್ಕ್ ಪ್ಲಗ್' ಶಕ್ತಿಯನ್ನು ಹೊತ್ತಿಸಿ ವಾಹನ ಚಲಿಸುವಂತೆ ಮಾಡಿತ್ತದೆ.

ಹಾಗೆಯೇ ಜಠರಾಗ್ನಿಯು ಆಹಾರವನ್ನು ಶಕ್ತಿಯಾಗಿಸಿ ದೇಹಕ್ಕೆ ಚೈತನ್ಯವನ್ನು ಒದಗಿಸುತ್ತದೆ. ಆಹಾರ ಸೇವನೆಯ ಬಳಿಕ ದೇಹದಲ್ಲಿ ಜೀರ್ಣಕ್ರಿಯೆ ಆರಂಭವಾಗುತ್ತದೆ. ಹಸಿವು, ಜೀರ್ಣಕ್ರಿಯೆ ಹಾಗೂ ದೇಹದ ಉಷ್ಣತೆಯೊಂದಿಗೆ ಜಠರಾಗ್ನಿಗೆ ಸಂಬಂಧವಿದೆ ಎಂದು ಭಾರತೀಯ ವೈದ್ಯಪರಂಪರೆ ವಿವರಿಸುತ್ತದೆ.

ಈ ಅಗ್ನಿಯ ಸಮತೋಲನದಲ್ಲಿ ವ್ಯತ್ಯಯ ಉಂಟಾದರೆ ಆರೋಗ್ಯದ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಭಾರತೀಯ ಸಂಸ್ಕೃತಿಯಲ್ಲಿ ಶಕ್ತಿಯ ಮೂಲಗಳನ್ನು ದೇವರೆಂದು ಭಾವಿಸಲಾಗಿದೆ. ಆಹಾರವನ್ನು ಜೀರ್ಣವಾಗಿಸಿ, ದೇಹಕ್ಕೆ ಶಕ್ತಿತುಂಬುವ ಜಠರಾಗ್ನಿಯನ್ನೂ ದೇವರೆಂದೇ ಪರಿಭಾವಿಸಲಾಗಿದ್ದು, ಬ್ರಹ್ಮ ರೂಪಾವಾದ ಅನ್ನವನ್ನೇ ಜೀರ್ಣಮಾಡಿತ್ತದೆ ಎಂದರೆ ಅಗ್ನಿಯು ಅಷ್ಟೇ ದೊಡ್ಡ ಶಕ್ತಿಯಾಗಿರಲೇ ಬೇಕು. ಆಧುನಿಕ ವಿಜ್ಞಾನವು ಜಠರಾಗ್ನಿಯನ್ನು 'ಸ್ಟೊಮಕ್ ಆಸಿಡ್' ಎಂದು ಹೇಳಿದ್ದು, ಇದು ಅಗ್ನಿಯ ಗುಣಲಕ್ಷಣಗಳನ್ನೇ ಹೊಂದಿದೆ ಎಂದು ಅಭಿಪ್ರಾಯಪಟ್ಟರು.

ಜಠರಾಗ್ನಿಯೇ ದೇವರು: ವೇದದ ಭಾಗವಾದ ಮಹಾನಾರಾಯಣೋಪನಿಷತ್ತಿನ ನಾರಾಯಣ ಸೂಕ್ತದಲ್ಲಿ ಜಠರಾಗ್ನಿಯನ್ನು ದೇವರೆಂದೇ ಪ್ರತಿಪಾದಿಸಲಾಗಿದ್ದು, ಭಗವದ್ಗೀತೆಯಲ್ಲಿ ನಾನೇ ಜಠರಾಗ್ನಿಯಾಗಿದ್ದೇನೆ ಎಂದು ಸ್ವಯಂ ಭಗವಂತನೇ ಹೇಳಿದ್ದಾನೆ. ಹಾಗೂ ಆಯುರ್ವೇದದ ಆಚಾರ್ಯರೂ ಕೂಡ ಜಠರಾಗ್ನಿಗೆ ಮಹತ್ವದ ಸ್ಥಾನ ನೀಡಿದ್ದಾರೆ. ದೇವರ ಕೋಣೆಯಲ್ಲಿ ವ್ಯವಸ್ಥೆ ಸರಿಯಿಲ್ಲದೇ ಇದ್ದರೆ ಅಲ್ಲಿ ದೇವರು ಇಲ್ಲದೇ ಇರಬಹುದು. ಆದರೇ ಪ್ರತಿಯೊಂದು ಜೀವಿಯೊಳಗೆ ಅಗ್ನಿರೂಪದಲ್ಲಿ ಭಗವಂತ ನೆಲಸಿದ್ದಾನೆ ಎಂದು ನಿರೂಪಿಸಿದರು.

ಮಾಜಿ ಸಚಿವ ಶಿವಾನಂದ ನಾಯ್ಕ ಭಟ್ಕಳ, ಪಶ್ಚಿಮಘಟ್ಟ ಕಾರ್ಯಪಡೆ ನಿಗಮದ ಮಾಜಿ ಅಧ್ಯಕ್ಷ ಗೋವಿಂದ ನಾಯ್ಕ, ಸಾಮಾಜಿಕ ಕಾರ್ಯಕರ್ತ ಡಾ.ಜಿ.ಜಿ ಹೆಗಡೆ, ಜಿ. ಎಸ್ ಹೆಗಡೆ ಕಾರ್ಯಕ್ರಮದಲ್ಲಿ ಭಾಗಿಗಳಾಗಿ ಶ್ರೀಗಳಿಂದ ಆಶೀರ್ವಾದ ಪಡೆದರು.

ಕುಮಟಾ ಹವ್ಯಕ ಮಂಡಲದ ಮೂರೂರುಕಲ್ಲಬೆ, ಹೆಗಡೆ, ಗುಡೆ ಅಂಗಡಿ, ಉಪ್ಪಿನ ಪಟ್ಟಣ, ಗೋವಾ, ಅಚವೆ ಹವ್ಯಕ ವಲಯಗಳ ಪರವಾಗಿ ದತ್ತಾತ್ರೆಯ ಚಂದ್ರಶೇಖರ್ ಭಟ್ ದಂಪತಿಗಳು ಶ್ರೀಗುರುಭಿಕ್ಷಾ ಸೇವೆ ಸಮರ್ಪಿಸಿದರು.

ವೇ.ಮೂ. ಕೇಶವಪ್ರಸಾದ್ ಭಟ್ಟ ಕೂಟೇಲು, ಜಿ. ಎಸ್. ಭಟ್ಟ ಉಪ್ಪುಂದ, ಸೌಮ್ಯ ಮಧ್ಯಸ್ಥ, ದಿನ ಪ್ರಧಾನರಾದ ಸುಬ್ರಾಯ ಹೆಗಡೆ ಮಾನ್ಯ ದಂಪತಿಗಳು ಉಪಸ್ಥಿತರಿದ್ದರು.

# ನೇತಾಜಿ ಅವಮಾನ: ಬಿಜೆಪಿ ಸಂಸದನ 'ಬಂಗ ವಿಭೂಷಣ' ವಾಪಸ್

● ವಿಕ್ರಮ ವಾಹಿನಿ | ಕೋಲ್ಕತ್ತಾ

ನೇತಾಜಿ ಸುಭಾಷ್ ಚಂದ್ರ ಬೋಸ್ ಕುರಿತು ಆಕ್ಷೇಪಾರ್ಹ ಹೇಳಿಕೆ ನೀಡಿದ ಆರೋಪದ ಹಿನ್ನೆಲೆಯಲ್ಲಿ ಬಿಜೆಪಿ ರಾಜ್ಯಸಭಾ ಸಂಸದ ನಾಗೇಂದ್ರನಾಥ್ ರಾಯ್ ಅಲಿಯಾಸ್ ಅನಂತ ಮಹಾರಾಜ್ ಅವರಿಗೆ ನೀಡಲಾಗಿದ್ದ ಪಶ್ಚಿಮ ಬಂಗಾಳದ 'ಬಂಗ ವಿಭೂಷಣ' ಪ್ರಶಸ್ತಿಯನ್ನು ರಾಜ್ಯ ಸರ್ಕಾರ ಹಿಂಪಡೆದಿದೆ.

2026ರ ಫೆಬ್ರವರಿ 21ರಂದು ಅನಂತ ಮಹಾರಾಜ್ ಅವರಿಗೆ ನೀಡಲಾಗಿದ್ದ ಪ್ರಶಸ್ತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ರಾಜ್ಯದ ಮಾಹಿತಿ ಮತ್ತು ಸಾಂಸ್ಕೃತಿಕ ವ್ಯವಹಾರಗಳ ಇಲಾಖೆ ಆದೇಶ ಹೊರಡಿಸಿದೆ. ಪ್ರಶಸ್ತಿ ಪುರಸ್ಕೃತರ ಅಧಿಕೃತ ಪಟ್ಟಿಯಿಂದ ಅವರ ಹೆಸರನ್ನು ತೆಗೆದುಹಾಕುವಂತೆಯೂ ಸೂಚಿಸಲಾಗಿದೆ.

ಅನಂತ ಮಹಾರಾಜ್ ಇನ್ನು ಮುಂದೆ ತಮ್ಮನ್ನು 'ಬಂಗ ವಿಭೂಷಣ' ಪುರಸ್ಕೃತರೆಂದು ಗುರುತಿಸಿಕೊಳ್ಳುವಂತಿಲ್ಲ. ಪ್ರಶಸ್ತಿಗೆ ಸಂಬಂಧಿಸಿದ ಯಾವುದೇ ಗೌರವ, ಸೌಲಭ್ಯ ಅಥವಾ ಸವಲತ್ತು ಪಡೆಯುವ ಹಕ್ಕನ್ನೂ ಅವರು ಹೊಂದಿರುವುದಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

**ನೇತಾಜಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ**

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರನ್ನು 'ಯುದ್ಧ ಅಪರಾಧಿ' ಎಂದು ಕರೆದಿದ್ದ ಅನಂತ ಮಹಾರಾಜ್, ಸ್ವಾತಂತ್ರ್ಯ ಹೋರಾಟದಲ್ಲಿ ನೇತಾಜಿ ಹಾಗೂ ಆಜಾದ್ ಹಿಂದ್ ಫೌಜ್ ಪಾತ್ರದ ಬಗ್ಗೆಯೂ ಪ್ರಶ್ನೆಗಳನ್ನು ಎತ್ತಿದ್ದರು ಎನ್ನಲಾಗಿದೆ. ಈ ಹೇಳಿಕೆಗಳು ವ್ಯಾಪಕ ಆಕ್ಷೇಪಕ್ಕೆ ಕಾರಣವಾಗಿದ್ದವು.



ನೇತಾಜಿ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹೇಳಿಕೆಗಳು ಮತ್ತು ಪೋಸ್ಟ್‌ಗಳನ್ನು ಪ್ರಕಟಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಪೊಲೀಸರಿಗೆ ಸೂಚಿಸಿದ ಬೆನ್ನಲ್ಲೇ ಸರ್ಕಾರ ಈ ಕ್ರಮ ಕೈಗೊಂಡಿದೆ. ನಾಗೇಂದ್ರನಾಥ್ ರಾಯ್ ಅವರು 'ಅನಂತ ಮಹಾರಾಜ್' ಎಂದೇ ಪ್ರಸಿದ್ಧರಾಗಿದ್ದು, 2023ರಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಪಶ್ಚಿಮ ಬಂಗಾಳದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದರು. ಅವರು ಗ್ರೇಟರ್ ಕೂಚ್ ಬಿಹಾರ್ ಪೀಪಲ್ಸ್ ಅಸೋಸಿಯೇಷನ್‌ನ ನಾಯಕರಾಗಿದ್ದು, ಉತ್ತರ ಬಂಗಾಳದ ರಾಜಬಂಶಿ ಸಮುದಾಯದಲ್ಲಿ ಪ್ರಭಾವ ಹೊಂದಿದ್ದಾರೆ.

# 'ಸಂಧ್ಯಾ ಕಿರಣ' ವಂತಿಕೆ ಆಧಾರಿತ ನಗದುರಹಿತ ಆರೋಗ್ಯ ಯೋಜನೆಗೆ ಸಂಪುಟ ಅನುಮೋದನೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಸರ್ಕಾರಿ ಪಿಂಚಣಿದಾರರು, ಕುಟುಂಬ ಪಿಂಚಣಿದಾರರು ಹಾಗೂ ಅರ್ಹ ಅವಲಂಬಿತ ದಿವ್ಯಾಂಗ ಮಕ್ಕಳಿಗೆ ನಗದುರಹಿತ ಆರೋಗ್ಯ ಸೇವೆ ಒದಗಿಸುವ 'ಸಂಧ್ಯಾ ಕಿರಣ' ವಂತಿಕೆ ಆಧಾರಿತ ಆರೋಗ್ಯ ಯೋಜನೆಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.

ಮೊದಲ ಹಂತದಲ್ಲಿ 70 ವರ್ಷಕ್ಕಿಂತ ಕಡಿಮೆ ವಯಸ್ಸಿನ ಸುಮಾರು 3.11 ಲಕ್ಷ ಪಿಂಚಣಿದಾರರು ಹಾಗೂ ಅವರ ಅರ್ಹ ಅವಲಂಬಿತರು ಸೇರಿದಂತೆ ಒಟ್ಟು 4.93 ಲಕ್ಷ ಫಲಾನುಭವಿಗಳು ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ.

ಯೋಜನೆಯಡಿ ಅರ್ಹ ಕುಟುಂಬಗಳಿಗೆ ವರ್ಷಕ್ಕೆ ಗರಿಷ್ಠ ರೂ 5 ಲಕ್ಷದವರೆಗೆ ದ್ವಿತೀಯ, ತೃತೀಯ ಹಾಗೂ ತುರ್ತು ಚಿಕಿತ್ಸೆಯನ್ನು ನಗದುರಹಿತವಾಗಿ ಪಡೆಯಲು ಅವಕಾಶ ಕಲ್ಪಿಸಲಾಗುತ್ತದೆ. ಎಬಿ–ಎಆರ್‌ಕೆ ಅಡಿಯಲ್ಲಿ ನೋಂದಾಯಿತ ಹಾಗೂ ಅನುಮೋದಿತ ಆಸ್ಪತ್ರೆಗಳಲ್ಲಿ ಈ ಸೌಲಭ್ಯ ದೊರೆಯಲಿದೆ.

ನಿಯಮಿತ ಪಿಂಚಣಿದಾರರು ಮೂಲ ಪಿಂಚಣಿಯ ಶೇ.1.25ರಷ್ಟು, ಕುಟುಂಬ ಪಿಂಚಣಿದಾರರು ಮೂಲ ಕುಟುಂಬ ಪಿಂಚಣಿಯ ಶೇ.0.75ರಷ್ಟು ವಂತಿಕೆ ಪಾವತಿಸಬೇಕು. ಯೋಜನೆಯಿಂದ ವಾರ್ಷಿಕ ಸುಮಾರು ರೂ 117 ಕೋಟಿ ವಂತಿಕೆ ಸಂಗ್ರಹವಾಗುವ ನಿರೀಕ್ಷೆಯಿದ್ದು, ಚಿಕಿತ್ಸಾ ವೆಚ್ಚ ಸುಮಾರು ರೂ 81.75 ಕೋಟಿ ಎಂದು ಅಂದಾಜಿಸಲಾಗಿದೆ.

ಚಿಕಿತ್ಸಾ ವೆಚ್ಚದ 70% ಫಲಾನುಭವಿಗಳ ವಂತಿಕೆ ಹಾಗೂ 30% ರಾಜ್ಯ ಸರ್ಕಾರದ ಪಾಲಿನಿಂದ ಭರಿಸಲಾಗುತ್ತದೆ. ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಅನುಷ್ಠಾನಗೊಳಿಸಲಾಗುವುದು.

ಪಿಂಚಣಿದಾರರು ಹಾಗೂ ಅವರ ಕುಟುಂಬಗಳಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಸುಲಭವಾಗಿ ಒದಗಿಸುವ ಜೊತೆಗೆ, ಚಿಕಿತ್ಸಾ ವೆಚ್ಚದಿಂದ ಉಂಟಾಗುವ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಉದ್ದೇಶವನ್ನು ಯೋಜನೆ ಹೊಂದಿದೆ.

# ಸಭಾಧ್ಯಕ್ಷ, ಸಭಾಪತಿ ಸ್ಥಾನಕ್ಕೆ ಇಂದು ಚುನಾವಣೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ವಿಧಾನಮಂಡಲದ ಎರಡು ಪ್ರಮುಖ ಸ್ಥಾನಗಳಾದ ವಿಧಾನಸಭೆಯ ಸಭಾಧ್ಯಕ್ಷ ಮತ್ತು ವಿಧಾನ ಪರಿಷತ್‌ನ , ಸಭಾಪತಿ ಸ್ಥಾನಗಳಿಗೆ ಶುಕ್ರವಾರ ಚುನಾವಣೆ ನಡೆಯಲಿದ್ದು, ಆಡಳಿತರೂಢ ಕಾಂಗ್ರೆಸ್ ಪಕ್ಷವು ತನ್ನ ಅಭ್ಯರ್ಥಿಗಳನ್ನು ಅಖಾಡಕ್ಕಿಳಿಸಿದೆ.

ಸಭಾಧ್ಯಕ್ಷರ ಸ್ಥಾನಕ್ಕೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ , ಜಿ.ಎಸ್.ಪಾಟೀಲ್ ಅವರು, ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರಗಳನ್ನು ಸಲ್ಲಿಸಿದರು.

ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ, ಸಲೀಂ ಅಹ್ಮದ್ ಅವರು ವಿಧಾನ ಪರಿಷತ್ ಕಾರ್ಯದರ್ಶಿ ಜ್ಯೋತಿ ಅವರಿಗೆ ಉಮೇದುವಾರಿಕೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೇರಿದಂತೆ ಇತರೆ ಸಚಿವರು, ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

ಎರಡೂ ಸದನಗಳಲ್ಲಿ ಕಾಂಗ್ರೆಸ್ ಪಕ್ಷವು ಸ್ಪಷ್ಟ ಬಹುಮತವನ್ನು ಹೊಂದಿದೆ. ಹೀಗಾಗಿ, ಈ ಸ್ಥಾನಗಳನ್ನು ಸುಲಭವಾಗಿ ವಶಪಡಿಸಿಕೊಳ್ಳುವ ವಿಶ್ವಾಸ ಕಾಂಗ್ರೆಸ್ ಪಕ್ಷಕ್ಕೆ ಇದೆ.

ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು, ಈ ಚುನಾವಣೆಗಾಗಿ ಅಧಿಕೃತ ಅಧಿಸೂಚನೆ ಹೊರಡಿಸಿದ್ದಾರೆ. ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ , ಈ ಸ್ಥಾನಗಳಿಗೆ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದು ಅನುಮಾನವಾಗಿದೆ. ಒಂದು ವೇಳೆ ಪ್ರತಿಪಕ್ಷಗಳು ಅಭ್ಯರ್ಥಿಗಳನ್ನು ಸ್ಪರ್ಧೆಗೆ ಇಳಿಸದಿದ್ದರೆ, ಆಡಳಿತಪಕ್ಷದ ನಾಯಕರು ಅವಿರೋಧವಾಗಿ ಆಯ್ಕೆಯಾಗಲಿದ್ದಾರೆ. ಒಂದು ವೇಳೆ ಸ್ಪರ್ಧೆ ಏರ್ಪಟ್ಟರೆ ಮಾತ್ರ ನಾಳೆ ಮತದಾನ ಪ್ರಕ್ರಿಯೆ ನಡೆಯಲಿದೆ.

ವಿಧಾನಸಭೆ ಸಭಾಧ್ಯಕ್ಷ ಸ್ಥಾನಕ್ಕೆ ಜಿ.ಎಸ್. ಪಾಟೀಲ್ ಹಾಗೂ ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಸಲೀಂ ಅಹ್ಮದ್ ಅವರ ಆಯ್ಕೆ ಬಹುತೇಕ ಖಚಿತವಾಗಿದೆ. ಎರಡೂ ಸದನಗಳಲ್ಲಿ ಕಾಂಗ್ರೆಸ್ ಸಂಖ್ಯಾಬಲ ಹೊಂದಿರುವುದರಿಂದ ಚುನಾವಣೆಯಲ್ಲಿ ಗೆಲುವಿನ ವಿಶ್ವಾಸದಲ್ಲಿದೆ.

# ಗೊಂದಲಿಗರಿಗೆ ಕಾಂಗ್ರೆಸ್‌ನಲ್ಲಿ ಸ್ಥಾನ ನೀಡಲು ಮನವಿ

● ವಿಕ್ರಮ ವಾಹಿನಿ | ಬೆಂಗಳೂರು

ಬುಡಕಟ್ಟು ಗೋಂದಳಿ ಸಮುದಾಯದವರಿಗೆ ಕಾಂಗ್ರೆಸ್ ಪಕ್ಷದಲ್ಲಿ ಸೂಕ್ತ ಸ್ಥಾನಮಾನ ನೀಡುವಂತೆ ಕೆಪಿಸಿಸಿ ನಾಯಕರಿಗೆ ಡಾ. ಸಿದ್ಧರಾಮ ವಾಘಮಾರೆ ಮನವಿ ಮಾಡಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಓಬಿಸಿ ಘಟಕದ ಪದಾಧಿಕಾರಿಗಳ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಓಬಿಸಿ ವಿಭಾಗದ ಅಧ್ಯಕ್ಷ, ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್ ಅವರಿಗೆ ಮನವಿ ಸಲ್ಲಿಸಿದರು. ಪಕ್ಷ ಸಂಘಟನೆಗಾಗಿ ಓಬಿಸಿ ವಿಭಾಗದಲ್ಲಿ ಕಾರ್ಯಾಧ್ಯಕ್ಷರ ಹುದ್ದೆ, ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಡಿಸಿಸಿ ಅಧ್ಯಕ್ಷರ ನೇಮಕ ಹಾಗೂ ಹಿರಿಯ ಮುಖಂಡರಿಗೆ ಸೂಕ್ತ ಸ್ಥಾನಮಾನ ಕಲ್ಪಿಸುವಂತೆ ಒತ್ತಾಯಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 138,